# ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 138 RNI Number : KNKAN/25/A2770 27-05-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :138 ರಾಯಚೂರು 27-05-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

# ಹೈಕಮಾಂಡ್ ಸಭೆಗಾಗಿ ದೆಹಲಿಯಲ್ಲಿ ಕಾಂಗ್ರೆಸ್ ಕಚೇರಿಯಲ್ಲಿ ಸಿದ್ದರಾಮಯ್ಯ, ಡಿಕೆಶಿ ಮುಖಾಮುಖಿ

ನವದೆಹಲಿ: ಹೈಕಮಾಂಡ್ ಬುಲಾವ್ ಮೇರೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಸೇರಿದಂತೆ ಸಚಿವರು ದೆಹಲಿಗೆ ತೆರಳಿದ್ದು, ಈ ಬೆಳವಣಿಗೆ ರಾಜ್ಯ ರಾಜಕೀಯದಲ್ಲಿ ತೀವ್ರ ಕುತೂಹಲ ಕೆರಳಿಸಿದೆ. ದೆಹಲಿಯ ಕಾಂಗ್ರೆಸ್ ಪ್ರಧಾನ ಕಚೇರಿ ಇಂದಿರಾ ಭವನದಲ್ಲಿ ಹೈಕಮಾಂಡ್ ನೇತೃತ್ವದಲ್ಲಿ ಇಂದು ನಡೆಯುವ ಮಹತ್ವದ ಸಭೆಯ ಮೇಲೆ ಎಲ್ಲರ ಕಣ್ಣು ನೆಟ್ಟಿದೆ.

ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಸಭೆಯಲ್ಲಿ ಭಾಗಿಯಾಗಲು ಈಗಾಗಲೇ ಇಂದಿರಾ ಭವನಕ್ಕೆ ಪ್ರತ್ಯೇಕ ಕಾರಿನಲ್ಲಿ ತೆರಳಿದ್ದಾರೆ. ಇದಕ್ಕೂ ಮುನ್ನ ಕರ್ನಾಟಕದ ಭವನದ ಬಳಿ ನಾಯಕತ್ವ ಬದಲಾವಣೆ ಕುರಿತ ಮಾಧ್ಯಮದವರ ಪ್ರಶ್ನೆಗೆ ಉಭಯ ನಾಯಕರೂ ಉತ್ತರಿಸಲು ನಿರಾಕರಿಸಿದರು.


ಇಂದಿರಾ ಭವನಕ್ಕೆ ರಾಹುಲ್: ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಪಕ್ಷದ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಕೂಡ ಇಂದಿರಾ ಭವನಕ್ಕೆ ಆಗಮಿಸಿದ್ದಾರೆ.

ಕಾಂಗ್ರೆಸ್ ಕಚೇರಿಯೆಲ್ಲಿ ಸಿಎಂ-ಡಿಸಿಎಂ ಮುಖಾಮುಖಿ: ಸಭೆಗೂ ಮುನ್ನ ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ಮಾತುಕತೆ ನಡೆಸಿದರು. ಜೊತೆಗೆ, ಪಕ್ಷದ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಮತ್ತು ರಣದೀಪ್ ಸುರ್ಜೇವಾಲ ಅವರನ್ನು ಸಿಎಂ ಸಿದ್ದರಾಮಯ್ಯ ಭೇಟಿ ಮಾಡಿದರು.

ಇನ್ನು ದೆಹಲಿಯ ಕರ್ನಾಟಕ ಭವನದಲ್ಲಿ ಮಾತನಾಡಿದ ಸಚಿವ ಎಂ.ಬಿ.ಪಾಟೀಲ್, ಸಿಎಂ ಸಿದ್ದರಾಮಯ್ಯನವರು ಹೈಕಮಾಂಡ್ ಭೇಟಿ ಮಾಡಲಿದ್ದಾರೆ. ಮುಂದಿನ ರಾಜ್ಯಸಭೆ ಅಥವಾ ವಿಧಾನ ಪರಿಷತ್ ಚುನಾವಣೆಯ ಬಗ್ಗೆ ಚರ್ಚೆ ನಡೆಯಬಹುದು. ಜೊತೆಗೆ, ಸಂಪುಟ ಪುನರ್ ರಚನೆಯ ಬಗ್ಗೆಯೂ ಇರಬಹುದು. ಈ ಸಭೆಯ ಬಗ್ಗೆ ರಾಹುಲ್ ಗಾಂಧಿ ಅವರಿಗೆ ಮಾತ್ರ ಗೊತ್ತಿದೆ ಎಂದರು.

ಗೊಂದಲಗಳಿಗೆ ಬೀಳಲಿದೆಯಾ ತೆರೆ?: ಸಿಎಂ ಸಿದ್ದರಾಮಯ್ಯ ದೆಹಲಿ ಭೇಟಿಯಿಂದ ರಾಜ್ಯ ರಾಜಕೀಯದಲ್ಲಿನ ಗೊಂದಲಕ್ಕೆ ತೆರೆ ಬೀಳಲಿದೆಯಾ ಎಂಬ ಕುತೂಹಲ ಮೂಡಿದೆ. ಹಿರಿಯ ಸಚಿವ ಕೆ.ಹೆಚ್.ಮುನಿಯಪ್ಪ ರಾಜ್ಯದಲ್ಲಿನ ಕಾಂಗ್ರೆಸ್ ಪವರ್ ಫೈಟ್ ಗೊಂದಲಕ್ಕೆ ಮೇ ಅಂತ್ಯಕ್ಕೆ ತೆರೆ ಎಳೆಯಲಿದೆ ಎಂದು ಹೇಳಿದ್ದರು. ಅದರಂತೆ ಇದೀಗ ಸಿಎಂ ಸಿದ್ದರಾಮಯ್ಯಗೆ ದೆಹಲಿಗೆ ಬುಲಾವ್ ನೀಡಿರುವುದು ರಾಜ್ಯದ ಪವರ್ ಫೈಟ್ ಗೊಂದಲಕ್ಕೆ ತೆರೆ ಬೀಳುವ ವಿಶ್ವಾಸ ಹಲವರದ್ದಾಗಿದೆ.

ಪ್ರಮುಖವಾಗಿ ಸಿಎಂ ದೆಹಲಿ ಭೇಟಿಯಿಂದ ನಾಯಕತ್ವ ಬದಲಾವಣೆಯಾಗುತ್ತಾ ಅಥವಾ ಸಂಪುಟ ಪುನಾರಚನೆಯಾಗುತ್ತಾ ಎಂಬ ಕುತೂಹಲವನ್ನು ಮೂಡಿಸಿದೆ. ನಾಯಕತ್ವ ಬದಲಾವಣೆಗೆ ಡಿಸಿಎಂ ಡಿಕೆಶಿ



ಆಪ್ತರ ಬಣ ಕಸರತ್ತು ನಡೆಸುತ್ತಿದ್ದರೆ, ಸಂಪುಟ ಪುನಾರಚನೆಗೆ ಸಿಎಂ ಸಿದ್ದರಾಮಯ್ಯ ಬಣ ಒತ್ತಡ ತಂತ್ರ ಹೆಣೆಯುತ್ತಿದೆ. ದೆಹಲಿ ವರಿಷ್ಠರು ಇವೆರಡ ಪೈಕಿ ಯಾವುದಕ್ಕೆ ಮಣೆ ಹಾಕುತ್ತಾರೆ ಎಂಬುದೇ ರಾಜ್ಯ ಕಾಂಗ್ರೆಸ್ ಶಾಸಕರಲ್ಲಿನ ಕುತೂಹಲವಾಗಿದೆ.

# ದಿ.30:ಮತದಾರರ ತೀವ್ರ ಪರಿಷ್ಕರಣೆ ಎಸ್ಐಆರ್ ವಿರೋಧಿಸಿ ಪ್ರತಿಭಟನೆ

ರಾಯಚೂರು, ಮೇ.26-

ಅಸಂವಿಧಾನಿಕ ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾರಕ ಕೇಂದ್ರ ಚುನಾವಣಾ ಆಯೋಗ ನಡೆಸುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ()ಯನ್ನು ವಿರೋಧಿಸಿ ದಿ.30 ರಂದು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಗುವುದು ಎಂದು ಎಸ್ ಐ ಆರ್ ಒಕ್ಕೂಟದ ಮುಖಂಡರಾದ ಶರಣಗೌಡ ಹೇಳಿದರು.



ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ, ಚುನಾವಣೆ ಅಯೋಗ ನಡೆಸುತ್ತಿರುವ ಮತದಾರ ತೀವ್ರ ಪರಿಷ್ಕರಣೆ ಪಾರದರ್ಶಕವಾಗಿಲ್ಲ. ಇದು ಕೇಂದ್ರ ಸರಕಾರದ ಸರ್ವಾಧಿಕಾರ ಧೋರಣೆ ಆಗಿದೆ ಎಂದರು.

ಪಶ್ಚಿಮ ಬಂಗಾಳ ಸೇರಿ ದೇಶದ ವಿವಿಧ ರಾಜ್ಯಗಳಲ್ಲಿ ಎಸ್ಐಆರ್ ಹೆಸರಿನಲ್ಲಿ 6 ಕೋಟಿಗೂ ಹೆಚ್ಚು ಮತದಾರರ ಮತದಾನದ ಹಕ್ಕು ಕಿತ್ತುಕೊಳ್ಳಲಾಗಿದೆ.

ಚುನಾವಣಾ ಆಯೋಗ ನಡೆಸುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಅರ್ಹ ಮತದಾರರನ್ನು ಪ್ರಜಾಸತ್ತಾತ್ಮಕ ವ್ಯವಸ್ಥೆಯಿಂದ ಹೊರಗಟ್ಟುವ ಕೇಂದ್ರ ಸರಕಾರದ ಸಂಚು ಇದಾಗಿದೆ ಎಂದು ಕೇಂದ್ರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮತದಾರ ಪಟ್ಟಿ ತೀವ್ರ ಪರಿಷ್ಕರಣೆಗೆ ವಿರೋಧವಿಲ್ಲ ಅದು ಪಾರದರ್ಶಕ ನಡೆಸಬೇಕು ಎಂದು ಅಗ್ರಹಿಸಿದ್ದಾರೆ.

ಕೇಂದ್ರ ಸರಕಾರ ದೇಶದಲ್ಲಿ ಅಧಿಕಾರಕ್ಕೆ ಬಂದು 12 ವರ್ಷಗಳು ಕಳೆದರೂ ಬಾಂಗ್ಲಾದೇಶ ನುಸುಲುಕೋರರನ್ನು ಪತ್ತೆ ಹಚ್ಚಿಲ್ಲ. ಎಸ್ ಐ ಆರ್ ಮೂಲಕ ಕೇಂದ್ರ ಸರಕಾರ ದೇಶದ ಜನರಿಗೆ ಅಪಮಾನ ಮಾಡುತ್ತಿದೆ ಎಂದು ಕೇಂದ್ರ ನಡೆ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.ಮೇ.30 ರಿಂದ ರಾಜ್ಯದಲ್ಲಿ ಮತದಾರ ಪಟ್ಟಿ ಪರಿಷ್ಕರಣೆ ನಡೆಯಲಿದೆ.ರಾಜ್ಯ ಸರಕಾರ ತಕ್ಷಣವೇ ಇದನ್ನು

3ನೇ ಪುಟ.....

# ಕೋಮುವಾದಿ ಗೂಂಡಾಗಳ ಮೇಲೆ ಪ್ರಕರಣ ಹಿಂಪಡೆಯುವ ನಿರ್ಧಾರ ಖಂಡಿಸಿ ಪ್ರತಿಭಟನೆ

ರಾಯಚೂರು, ಮೇ.26-

ಸಮಾಜದಲ್ಲಿ ದ್ವೇಷ ಭಾಷಣಗಳ ಮೂಲಕ ಅಶಾಂತಿ ಸೃಷ್ಟಿಸಿದವರು, ಧರ್ಮದ ಹೆಸರಿನಲ್ಲಿ ಸಮಾಜವನ್ನು ವಿಭಜಿಸಿ ಕೋಮುವಾದಿ, ಸಂಘ ಪರಿವಾರದ ಗೂಂಡಾಗಳ ಮೇಲೆ ಪ್ರಕರಣಗಳು ಹಿಂಪಡೆಯುವ ನಿರ್ಧಾರ ಖಂಡಿಸಿ ಗೋ ರಕ್ಷಣೆ ನೆಪದಲ್ಲಿ ಗುಂಡಾಗಿರಿ ಖಂಡಿಸಿ ಇಂದು ಎಸ್.ಡಿ.ಪಿ.ಐ ಪಕ್ಷದ ವ'ುಖಂಡ'ರ'ು ಪ್ರತಿಭಟಿಸಿದರು.




ಸಮಾಜದಲ್ಲಿ ಸ್ವಾಸ್ಥ ಹಾಳು ಮಾಡುತ್ತಿರುವ ಹಾಗೂ ನಿರಂತರವಾಗಿ ವಿಷಕಾರಿ ಭಾಷಣ ಮಾಡುವವರ ವಿರುದ್ಧ ದಾಖಲಾಗಿದ್ದ ಪ್ರಕರಣಗಳನ್ನು ಸರ್ಕಾರ ಹಿಂಪಡೆದಿರುವುದು ಕಾನೂನು ಸುವ್ಯವಸ್ಥೆಗೆ ಒಂದು ದೊಡ್ಡ ಸವಾಲಾಗಿದೆ. ಈ ಕೂಡಲೇ ತನ್ನ ನಿರ್ಧಾರವನ್ನು ರದ್ದುಪಡಿಸಿ ಈ ಪ್ರಕರಣಗಳಲ್ಲಿ ಕೋಮುವಾದಿ ಗೂಂಡಾಗಳಿಗೆ ಕಾನೂನಾತ್ಮಕ ಸೂಕ್ತ ಶಿಕ್ಷೆ ಆಗುವಂತೆ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿ ನಗರದ ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಕರ್ನಾಟಕ ಕಾಂಗ್ರೆಸ್ ಸರ್ಕಾರ ಸಂಘ ಪರಿವಾರವನ್ನು ಸಮಾಧಾನ ಪಡಿಸುವ ಉದ್ದೇಶದೊಂದಿಗೆ ಇತ್ತೀಚೆಗೆ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಪ್ರಮೋದ್ ಮುತಾಲಿಕ್, ಚೈತ್ರಾ ಕುಂದಾಪುರ, ಆಂದೋಲ ಸ್ವಾಮಿ ಸೇರಿದಂತೆ ಕೋಮು ದ್ವೇಷ ಹರಡಿ, ಗಲಭೆ ಸೃಷ್ಟಿಸುವವರ ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯಲು ತೆಗೆದುಕೊಂಡಿರುವ ನಿರ್ಧಾರ ರಾಜ್ಯದ ಜನತಂತ್ರ, ಕಾನೂನು ಸುವ್ಯವಸ್ಥೆಯ ಮೂಲ ತತ್ವಗಳ ಮೇಲಿನ ನೇರ ದಾಳಿಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.ಕಾನೂನು ಎಲ್ಲರಿಗೂ ಸಮಾನವಾಗಿದೆ ಎನ್ನುವ ನೆಪವೊಡ್ಡಿಕೊಂಡು ಸಮಾಜ ಘಾತುಕ ಶಕ್ತಿಗಳನ್ನು ಪ್ರೋತ್ಸಾಹಿಸುವುದು ಅತ್ಯಂತ ಅಘಾತಕಾರಿ ಸಂಗತಿ. ಕೋಮು ಕ್ರಿಮಿಗಳಿಗೆ ವಿಶೇಷ ರಿಯಾಯಿತಿ ನೀಡುತ್ತಿರುವ ಸರ್ಕಾರದ ನಡೆ ಪ್ರಶ್ನಾರ್ಹವಾಗಿದೆ ಎಂದು ಕಿಡಿಕಾರಿದರು.

3ನೇ ಪುಟ.....

# ಸೇನೆಯನ್ನು ಸೇರಿರಿ ದೇಶದ ರಕ್ಷಣೆಗೆ ದುಡಿಯಿರಿ ಡಾ. ಬಿರಾದಾರ

ರಾಯಚೂರು,ಮೇ.26-

ದೇಶದ ಸಂರಕ್ಷಣೆಯಲ್ಲಿ ಪ್ರತಿಯೊಬ್ಬ ಪ್ರಜೆಯ ಕರ್ತವ್ಯವಿದೆ .ಅದರಲ್ಲೂ ಸಹ ವಿಶೇಷವಾಗಿ ಭೂದಳ. ವಾಯುದಳ .ಮತ್ತು ನೌಕಾದಳ ಮೂರು. ಸೇನಾ ಪಡೆಗಳು ನಿರಂತರವಾಗಿ ಇದರಲ್ಲಿ ಕಾರ್ಯ ಮಾಡುತ್ತಿರುವ .ಸಕಲ ಸೈನಿಕರು ದೇಶದ ರಕ್ಷಣೆಗಾಗಿ ಹಗಲು ರಾತ್ರಿ ಕಾರ್ಯವನ್ನ ನಿರ್ವಹಿಸುತ್ತಿದ್ದಾರೆ. ವಿಶೇಷವಾಗಿ ರಾಯಚೂರು ಜಿಲ್ಲೆಯಿಂದ ಹಲವಾರು ಜನ ಅಗ್ನಿವೀರ ನೇಮಕಾತಿಗಾಗಿ ಅರ್ಜಿಯನ್ನು ಸಲ್ಲಿಸಿದ್ದ ಅಂತವರು ಹೇಗೆ ದೈಹಿಕ ಮತ್ತು ಮಾನಸಿಕ ಸಾಮರ್ಥ್ಯವನ್ನು ಹೊಂದಿರಬೇಕು ಈ ಸಾಮರ್ಥ್ಯದ ಪರೀಕ್ಷೆಗಳು ಹೇಗೆ ಎದುರಿಸಬೇಕು ಎಂಬ ವಿಷಯದ ಕುರಿತು ಮಹತ್ವದ ಕಾರ್ಯಾಗಾರವನ್ನ ಇವತ್ತು ರಾಯಚೂರಿನ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ ಜಿಲ್ಲಾ ಘಟಕ ಎ ಆರ್ ಓ ಬೆಳಗಾಂ ಮತ್ತು 35 ಎನಸಿ.ಸಿ 35. ಆಶ್ರಯದಲ್ಲಿ ಮಹತ್ವದ ಕಾರ್ಯಾಗಾರವನ್ನು ಹಮ್ಮಿಕೊಂಡಿದ್ದು ದೇಶದ ರಕ್ಷಣೆಗೆ ಯುವಕರು ಯುವತಿಯರು ಒಂದಾಗಬೇಕು .ಊಟ ಮಾಡುವಾಗ ರೈತರನ್ನು ನೆನೆಸಬೇಕು. ಉಂಡು ಮಲಗುವಾಗ ಸೈನಿಕರ ನ್ನು ನೆನೆಸಬೇಕು ಎನ್ನುವಂತೆ. ನಾವು ದೇಶದಲ್ಲಿ ಶಾಂತಿ .ಗಡಿಯಲ್ಲಿ ಬಹಳ ಭದ್ರತೆ ಮತ್ತು ಶಾಂತಿ ಇದೆ ಎಂದರೆ ಅಲ್ಲಿ ನಮ್ಮ ಸೈನಿಕರ ಹಗಲು ರಾತ್ರಿ ಕೆಲಸ. ಆ ಹಿನ್ನೆಲೆಯಲ್ಲಿ ಅಗ್ನಿವೀರ ನೇಮಕಾತಿಗೆ ಅರ್ಜಿದ ಹಾಕಿದವರು ಪರೀಕ್ಷೆ ತಯಾರಿಕೆ ಅಗತ್ತಿರುವ ಪರಿಚಾತ್ಮಕ ಮಾರ್ಗದರ್ಶನ ಮತ್ತು ತರಬೇತಿಯನ್ನು ಹಾಗೂ ಅಗ್ನಿವೀರ ನೇಮಕಾತಿಯ ಪ್ರಕ್ರಿಯೆ ಬಗ್ಗೆ ಪರೀಕ್ಷೆಯ ಮಾದರಿ ತಯಾರಿಯ ತಂತ್ರಗಳು ಹಾಗೂ ದೈಹಿಕ ಮತ್ತು ಲಿಖಿತ ಪರೀಕ್ಷೆಗಳ ಕುರಿತು ಸಮಗ್ರ ಮಾಹಿತಿಯನ್ನು ನೀಡಲಿದ್ದಾರೆ ಈ ತರಬೇತಿಯ ಕಾರ್ಯಾಗಾರದ ಲಾಭವನ್ನು ಪಡೆದುಕೊಂಡು ರಾಯಚೂರು ಜಿಲ್ಲೆಯಿಂದ ಹೆಚ್ಚು ಜನ ನೇಮಕಾತಿ ಆಗಬೇಕೆಂದು. ದಿನಾಂಕ 25.05.2025 ರಂದು ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಬಸವೇಶ್ವರ ಪ್ರೇಕ್ಷಾ ಗಾರದಲ್ಲಿ ನಡೆದ ಅಗ್ನಿವೀರ ನೇಮಕಾತಿಯ ಕಾರ್ಯಾಗಾರವನ್ನು ಜ್ಯೋತಿಯನ್ನ ಬೆಳೆಗಿಸಿದ ಮೂಲಕ ಉದ್ಘಾಟಿಸಿದ ನಂತರ ರಾಯಚೂರು ಜಿಲ್ಲಾ ಭಾರತೀಯ ರೆಡ್




3ನೇ ಪುಟ.....

# ಉನ್ನತ ಮಟ್ಟದ ಅಂತರ ರಾಜ್ಯಸಭೆಯಲ್ಲಿ ಭಾಗಿಯಾದ ಶಾಸಕ ದದ್ದಲ್

ರಾಯಚೂರು ಮೇ25

ಇಂದು ಹೈದರಾಬಾದ್ ಸಕ್ರೆಟೇರಿಯಟ್ ನಲ್ಲಿ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕೊರ್ತುಕುಂದಾ ಸಮೀಪ ಕೃಷ್ಣ ನದಿಗೆ ಅಡ್ಡಲಾಗಿ ನಿರ್ಮಿಸಲು ಉದ್ದೇಶಿಸಿರುವ ಸೇತುವೆ ಕಂ ಬ್ಯಾರೇಜ್ ಯೋಜನೆ ಕುರಿತು ಕರ್ನಾಟಕ ಮತ್ತು ತೆಲಂಗಾಣ ರಾಜ್ಯಗಳ ಪ್ರತಿನಿಧಿಗಳ ನಡುವಿನ ಉನ್ನತಮಟ್ಟದ ಅಂತರ ರಾಜ್ಯ ಸಭೆಯಲ್ಲಿ ತೆಲಂಗಾಣದ ಕಾರ್ಯಾಲಯದಲ್ಲಿ ಭಾಗಿಯಾದ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ಅಧ್ಯಕ್ಷರಾದ ಬ್ರಸನಗೌಡ ದದ್ದಲ್ ರವರು ಈ



ಸಭೆಯಲ್ಲಿ ತೆಲಂಗಾಣ ನೀರಾವರಿ ಸಚಿವರಾದ ಉತ್ತಮ ಕುಮಾರ್ ರೆಡ್ಡಿರವರು ಅಧ್ಯಕ್ಷತೆಯನ್ನು ವಹಿಸಿದ್ದರು ಮೀನುಗಾರಿಕೆ ಹಾಗೂ ಕ್ರೀಡಾ ಸಚಿವರಾದ ವಾಕಟಿ ಶ್ರೀಹರಿ ರವರು ಪ್ರವಾಸೋದ್ಯಮ ಸಚಿವರಾದ ಜುಪ್ಪಳ್ಳಿ ಕೃಷ್ಣ ರವರು ಹಾಗೂ ನಾಗರ್ ಕರ್ನೂಲ್ ಕ್ಷೇತ್ರದ ಮಾನ್ಯ ಸಂಸದರಾದ ಡಾ ಮಲ್ಲು ರವಿ ರವರು ಸೇರಿದಂತೆ ಸಣ್ಣ ನೀರಾವರಿ ಸುಣ್ಣ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ಎಸ್ ಬೋಸ್ ರಾಜ್ ರವರು ರಾಯಚೂರು ಸಂಸದರಾದ ಜಿ ಕುಮಾರ್ ನಾಯಕ ರವರು ಸೇರಿದಂತೆ ಇತರ ರಾಜಕೀಯ ಗಣ್ಯರು ಸಭೆಯಲ್ಲಿ ಭಾಗಿಯಾಗಿ ಅಂತರ್ಜಲ ಅಭಿವೃದ್ಧಿ ಇಲಾಖೆಯ ಈ ಮಹತ್ವದ ಮುಂದಾಳತ್ವವು ರೈತರಿಗೆ ನೀರಾವರಿ ಸೌಲಭ್ಯ ವಿಸ್ತರಣೆ ಕುಡಿಯುವ ನೀರಿನ ಭದ್ರತೆ ಸುಸ್ಥಿರ ಕೃಷಿ ಅಭಿವೃದ್ಧಿ ಹಾಗೂ ಪರಿಣಾಮಕಾರಿ ಅಂತರ್ಜಲ ಮರುಭರತಿಗೆ ಸರಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಸಭೆಯಲ್ಲಿ ಯೋಜನೆಯಿಂದಾಗುವ ಪ್ರಯೋಜನಗಳು ಹಾಗೂ ಆತಂಕಗಳ ಕುರಿತು ಸವಿಸ್ತಾರ ಚರ್ಚೆ ನಡೆಯಿತು ವಿಷಯಕ್ಕೆ ಸಂಬಂಧಿಸಿದಂತೆ ಇನ್ನಷ್ಟು ಸ್ಪಷ್ಟತೆ ಪಡೆದು ಸೂಕ್ತ ನಿರ್ಧಾರಕ್ಕೆ ಬರಲು ಮುಂದಿನ ದಿನಗಳಲ್ಲಿ ಸಹ ಸ'ವ'ಾಲೋಚ'ನೆ'ಗ'ಳ'ನ'್ನ ಮುಂದುವರಿಸುವ ನಿರ್ಧಾರ ಕೈಗೊಳ್ಳಲಾಯಿತು ಎಂದು ಮೂಲಗಳು ತಿಳಿಸಿವೆ

# ನೂತನ ಜಿಲ್ಲಾಧಿಕಾರಿಗೆ ಮುಖಂಡರಿಂದ ಸನ್ಮಾನ




ರಾಯಚೂರು, ಮೇ 25:

ಜಿಲ್ಲಾಧಿಕಾರಿಗಳಾದ ಶ್ರೀಮತಿ ಪೂವಿತ . ರಾಯಚೂರು ಇವರನ್ನು ಇಂದು ಡಾ. ಭಾಸ್ಕರ್ ಬಾಬು ಅವರ ನೇತೃತ್ವದಲ್ಲಿ ವಿವಿಧ ಸಾಮಾಜಿಕ ಮುಖಂಡರು ಹಾಗೂ ಗಣ್ಯರು ಭೇಟಿ ಮಾಡಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಸಾಮಾಜಿಕ ಹೋರಾಟಗಾರ ಶ್ರೀ ಪ್ರಸಾದ್ ಭಂಡಾರಿ, ಕಲಾವಿದ ಶ್ರೀ ಪ್ರತಾಪ್ ರೆಡ್ಡಿ, ಶ್ರೀ ಮಮ್ಮದ್ ಹನೀಫ್, ಮಾಧ್ಯಮ ಮಿತ್ರರಾದ ಶ್ರೀ ಮುತ್ತಣ್ಣ, ಬಹುಜನ ದಲಿತ ಸಂಘದ ಜಿಲ್ಲಾ ಅಧ್ಯಕ್ಷರಾದ ಶ್ರೀ ನರಸಿಂಹ ಗದಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಭೇಟಿಯ ವೇಳೆ ಡಾ. ಬಿ.ಆರ್. ಅಂಬೇಡ್ಕರ್ ಅವರ ": " ಪುಸ್ತಕವನ್ನು ಜಿಲ್ಲಾಧಿಕಾರಿಗಳಿಗೆ ನೀಡಿ ಗೌರವಿಸಲಾಯಿತು.

# ಸೊಳ್ಳೆಯಿಂದ ಹರಡುವ ಖಾಯಿಲೆಗಳ ತಡೆಗೆ ಸಾರ್ವಜನಿಕರು ಸಹಕರಿಸಿ: ಡಾ.ಸುರೇಂದ್ರ ಬಾಬು

ರಾಯಚೂರು ಮೇ.25-

ಕಳೆದ 2-3 ದಿನಗಳಿಂದ ಜಿಲ್ಲೆಯಾದ್ಯಂತ ಸುರಿದ ಅಕಾಲಿಕ ಮಳೆಯಿಂದ ತಗ್ಗು ಗುಂಡಿಗಳು ಸೇರಿದಂತೆ ಅಲ್ಲಲ್ಲಿ ನೀರು ನಿಲ್ಲುವುದರಿಂದ ಡೆಂಗ್ಯು ಹರಡುವ ಈಡಿಸ್ ಇಜಿಪ್ಟೈ ಸೊಳ್ಳೆಯ ಸಂತತಿ ಹೆಚ್ಚಾಗುವ ಸಾಧ್ಯತೆ ಇದೆ. ಇದರಿಂದ ಸಂಭಾವ್ಯ ಡೆಂಗ್ಯು ಪ್ರಕರಣಗಳು ಕಂಡು ಬರುವ ಸಾಧ್ಯತೆಗಳಿದ್ದು, ಸಾರ್ವಜನಿಕರು ಮನೆಯ ಸುತ್ತಲು ನೀರು ನಿಲ್ಲದಂತೆ ನೋಡಿಕೊಳ್ಳುವ ಜೊತೆಗೆ ಬಳಕೆಗಾಗಿ ನೀರು ತುಂಬುವ ಡ್ರಮ್, ಬ್ಯಾರೆಲ್, ಕಲ್ಲಿನ ಡೋಣಿ ಮುಂತಾದ ಪರಿಕರಗಳನ್ನು ವಾರಕ್ಕೊಮ್ಮೆ ಸ್ವಚ್ಚಗೊಳಿಸಿ ಮತ್ತು



ಯಾರಿಗಾದರೂ ಒಂದೇ ದಿನ ಜ್ವರ ಕಂಡು ಬಂದರೂ ಸಹ ವೈದ್ಯರ ಬಳಿ ಪರೀಕ್ಷಿಸಿ ಅಗತ್ಯ ಚಿಕಿತ್ಸೆ ಪಡೆಯಿರಿ ಎಂದು ಸಾರ್ವಜನಿಕರಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಅವರು ಕೋರಿದ್ದಾರೆ.

ಮನೆಯ ಒಳಗಿನ ಸಾಮಗ್ರಿಗಳನ್ನು ನಿಗಾ ವಹಿಸಿದಂತೆ ಮನೆಯ ಹೊರಗೆ ನೀರು ಸುತ್ತಲು

3ನೇ ಪುಟ.....



ರಾಯಚೂರು: ದಿನಾಂಕ.24/5/2026ಸುವರ್ಣ ಫೋಕಸ್, ಕನ್ನಡ ದಿನಪತ್ರಿಕೆ.ಹಾಗೂ ಕದಂಬ ಫೌಂಡೇಶನ್ ವತಿಯಿಂದ.ಬುದ್ಧ, ಬಸವ, ಅಂಬೇಡ್ಕರ್ ಜಯಂತಿಯ ಅಂಗವಾಗಿ.ಗೋವಾ.ರಾಜ್ಯದ.ಪಣಜಿ ಎಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.ಈ ಕಾರ್ಯಕ್ರಮದಲ್ಲಿ.ನಿರ್ಮಾಪಕರಾದ ಸಂಜಯಗೌಡ.ಸಂಪಾದಕರಾದ .ಆಲಂ ಗನಿ.ಮತ್ತು ಸುಮಾರು ಗಣ್ಯಮಾನರು.ಈ ಒಂದು ಕಾರ್ಯಕ್ರಮದಲ್ಲಿ.ಭಾಗವಹಿಸಿದರು.ಇದೇ ಸಮಯದಲ್ಲಿ.ಯುವಕರ ಕಣ್ಮಣಿ.ದೀನ ದಲಿತ.ಅಲ್ಪಸಂಖ್ಯಾತರ ಯುವ ನಾಯಕ.ಡಾಕ್ಟರ್ ಜಾಫ಼ರ್ಹುಸೇನ್.ಡಿಎಸ್ಎಸ್.ರಾಜ್ಯ ಯುವ ಘಟಕ ಅಧ್ಯಕ್ಷರು.ಮತ್ತು.ಅಪ್ನಿ ಜನತಾ ಪಾರ್ಟಿಯ ಕರ್ನಾಟಕ.ರಾಜ್ಯ ಉಪಾಧ್ಯಕ್ಷರು.ಗೋಲ್ಡನ್ ನ್ಯಾಶನಲ್ ಐಕಾನ್.ಅವಾರ್ಡ್ ಅನ್ನು.ಕೊಟ್ಟು.ಸನ್ಮಾನಿಸಿದರು.

# ಬಳ್ಳಾರಿ: ರಾಷ್ಟ್ರೀಯ ಹೆದ್ದಾರಿ 150-ಎ ರಸ್ತೆಯ ಸೇತುವೆ ಮರು ನಿರ್ಮಾಣ; 60 ದಿನಗಳ ಕಾಲ ವಾಹನ ಸಂಚಾರ ಮಾರ್ಗ ಬದಲಾವಣೆ

ಬಳ್ಳಾರಿ,ಮೇ 25-

ನಗರದಲ್ಲಿ ಹಾದುಹೋಗಿರುವ ರಾಷ್ಟ್ರೀಯ ಹೆದ್ದಾರಿ 150-ಎ ರಸ್ತೆಯ ತುಂಗಭದ್ರ ಬಲದಂಡೆ ಮೇಲ ್ಮಟ್ಟದ ವಿತರಣಾ ಕಾಲುವೆ (ಸಂ-14, ಕಿ.ಮೀ 4.40) ಮೇಲಿನ ಸೇತುವೆಯ ಮರು ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳುತ್ತಿರುವುದರಿಂದ ಸಾರ್ವಜನಿಕ ಸುರಕ್ಷತೆ ಹಾಗೂ ಸುಗಮ ಸಂಚಾರದ ಹಿತದೃಷ್ಟಿಯಿಂದ ಮುಂದಿನ 60 ದಿನಗಳ ಕಾಲ ಈ ಮಾರ್ಗದಲ್ಲಿ ತಾತ್ಕಾಲಿಕವಾಗಿ ವಾಹನ ಸಂಚಾರವನ್ನು ನಿರ್ಬಂಧಿಸಿ, ಪರ್ಯಾಯ ಮಾರ್ಗವನ್ನು ಕಲ್ಪಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯೂ ಆದ ನಾಗೇಂದ್ರ ಪ್ರಸಾದ್ ಕೆ. ಅವರು ಆದೇಶ ಹೊರಡಿಸಿದ್ದಾರೆ.



ಮೋಟಾರ್ ವಾಹನ ಕಾಯ್ದೆ 1988 ರ ಅಧಿನಿಯಮ 115 ಹಾಗೂ ಕರ್ನಾಟಕ ಮೋಟಾರ್ ವಾಹನ ನಿಯಮಗಳು 1989 ರ ನಿಯಮ 221 ಎ (5) ರನ್ವಯ ಪ್ರದತ್ತವಾದ ಅಧಿಕಾರ ಚಲಾಯಿಸಿ ಈ ಆದೇಶ ಹೊರಡಿಸಿದ್ದಾರೆ.

ಕಾಲುವೆಗೆ ನೀರು ಹರಿಸುವ ಮುನ್ನವೇ ಈ ಸೇತುವೆ ಕಾಮಗಾರಿಯನ್ನು ಅತೀ ಜರೂರಾಗಿ ಮುಗಿಸಬೇಕಾಗಿರುವುದರಿಂದ ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರ ವರದಿ ಮತ್ತು ಅಭಿಪ್ರಾಯವನ್ನು ಪರಿಗಣಿಸಿ ಈ ಕೆಳಗಿನಂತೆ ಸಂಚಾರ ಮಾರ್ಗ ಬದಲಾವಣೆ ಮಾಡಲಾಗಿದೆ.

ಪರ್ಯಾಯ ಸಂಚಾರ ಮಾರ್ಗ: ಸಿರುಗುಪ್ಪ ಕಡೆಯಿಂದ ಬಳ್ಳಾರಿ ಹಾಗೂ ಬೆಂಗಳೂರು ರಸ್ತೆ ಕಡೆಗೆ ಸಂಚರಿಸುವ ಭಾರಿ ಮತ್ತು ಲಘು ವಾಹನಗಳು ಹವಂಬಾವಿ ಹತ್ತಿರ ಇರುವ ಕೆನಾಲ್ ಪಕ್ಕದ ಎಡಭಾಗದ ಸರ್ವಿಸ್ ರಸ್ತೆ ಮುಖಾಂತರ ತಾಳೂರು ರಸ್ತೆ, ತಾಳೂರು ರಸ್ತೆ ಕ್ರಾಸ್ ಮತ್ತು ಎಸ್.ಪಿ ಸರ್ಕಲ್ ಮೂಲಕ ಚಲಿಸಬೇಕಾಗುತ್ತದೆ.

ಬಳ್ಳಾರಿ ನಗರದ ಕಡೆಯಿಂದ ಸಿರುಗುಪ್ಪಕ್ಕೆ ಹೋಗುವ ಭಾರಿ ಮತ್ತು ಲಘು ವಾಹನಗಳು ಹವಂಭಾವಿ ಹತ್ತಿರ ಇರುವ ಕೆನಾಲ್ ಪಕ್ಕದ ಎಡಭಾಗದ ರಸ್ತೆಯಿಂದ 100 ಮೀಟರ್ ಅಂತರದಲ್ಲಿರುವ ಸೇತುವೆ ಮೂಲಕ ತಿರುವು ಪಡೆದುಕೊಂಡು ಸಿರುಗುಪ್ಪ ರಸ್ತೆ ಕಡೆಗೆ ಸಂಚರಿಸಬೇಕು.

ಸುರಕ್ಷತಾ ಕ್ರಮಗಳಿಗೆ ಕಟ್ಟುನಿಟ್ಟಿನ ಆದೇಶ:

ಹವಂಬಾವಿ ಕೆನಾಲ್ ಪಕ್ಕದಲ್ಲಿರುವ ಸರ್ವಿಸ್ ರಸ್ತೆಗಳ ಬದಿಯಲ್ಲಿ ಸಾರ್ವಜನಿಕರು ಮನೆಗಳನ್ನು ಕಟ್ಟಿಕೊಂಡು ವಾಸಿಸುತ್ತಿದ್ದಾರೆ. ಅಲ್ಲದೆ ಈ ರಸ್ತೆಗಳು ಸದ್ಯ ತಗ್ಗು ಗುಂಡಿಗಳಿಂದ ಕೂಡಿದ್ದು, ರಾತ್ರಿ ವೇಳೆಯಲ್ಲಿ ಸರಿಯಾದ ಬೆಳಕಿನ ವ್ಯವಸ್ಥೆ ಇಲ್ಲದಿರುವುದರಿಂದ ಭಾರಿ ವಾಹನಗಳು ಸಂಚರಿಸುವಾಗ ಯಾವುದೇ ಅಪಘಾತಗಳು ಸಂಭವಿಸದಂತೆ ಲೋಕೋಪಯೋಗಿ ಇಲಾಖೆಯು ಕಡ್ಡಾಯವಾಗಿ ಸೂಕ್ತ ರಸ್ತೆ ಸಂಕೇತಗಳು ಹಾಗೂ ಇತರೆ ರಸ್ತೆ ಸುರಕ್ಷತಾ ಕ್ರಮಗಳನ್ನು ಅಳವಡಿಸಬೇಕು ಎಂದು ಜಿಲ್ಲಾಧಿಕಾರಿಯವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.

ಈ ತಾತ್ಕಾಲಿಕ ಸಂಚಾರ ನಿರ್ಬಂಧ ಮತ್ತು ಮಾರ್ಗ ಬದಲಾವಣೆಯ ಅಧಿಸೂಚನೆಯು ಕಾಮಗಾರಿ ಮುಕ್ತಾಯಗೊಂಡು ರಸ್ತೆ ಸಂಚಾರವು ಯಥಾಸ್ಥಿತಿಗೆ ಬರುವವರೆಗೂ ಜಾರಿಯಲ್ಲಿರಲಿದೆ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

# ಕುರುಬ ಸಮಾಜದ ಶಿಕ್ಷಣ ಸಂಸ್ಥೆಗಳ ಆರಂಭಕ್ಕೆ ಅಗತ್ಯ ಮೂಲ ಸೌಕರ್ಯ -ಶಾಸಕ ಗವಿಯಪ್ಪ

ಹೊಸಪೇಟೆ ಮೇ 25:

ಇತರೆ ಸಮಾಜಗಳು ಶಿಕ್ಷಣ ಸಂಸ್ಥೆಗಳಿಗೆ ಒತ್ತು ನೀಡಿದಂತೆ ಕುರುಬ ಸಮಾಜ ಶಿಕ್ಷಣ ಸಂಸ್ಥೆಗ ಳನ್ನು ತೆರೆದರೆ ಅದಕ್ಕೆ ಬೇಕಾದ ಸರ್ಕಾರಿ ಭೂಮಿಯನ್ನು ಒದಗಿ ಸಿಕೊಡಲು ಸಿದ್ದ ಎಂದು ಶಾಸಕ ಎಚ್.ಆರ್.ಗವಿಯಪ್ಪ ಹೇಳಿದರು. ಸ್ಥಳೀಯ ಜಿಲ್ಲಾ ಕುರುಬರ ಸಂಘ ಹಾಗು ಜಿಲ್ಲಾ ಕನಕ ನೌಕರರ ಸಂಘ ಹಮ್ಮಿಕೊಂಡಿದ್ದ ಎಸ್‌ಎಸ್ ಎಲ್‌ಸಿ, ಪಿಯು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿ ದರು.




ಲಿಂಗಾಯತ ಸಮಾಜ ಶಿಕ್ಷಣ ಸಂಸ್ಥೆಗಳಿಗೆ ಒತ್ತು ಕೊಟ್ಟಿದೆ, ಅದೇ ರೀತಿ ಕುರುಬ ಸಮಾಜ ಸಹ ಶಿಕ್ಷಣ ಸಂಸ್ಥೆ ತೆರೆಯಲು ಆದ್ಯತೆ ನೀಡಬೇಕು, ಇದರಿಂದ ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗುತ್ತದೆ, ಸಮಾಜ ಈ ಪ್ರಯತ್ನ ಮಾಡಲಿ, ಸರ್ಕಾ ರದಿಂದ ಒಂದೆರಡು ಎಕರೆ ಭೂಮಿ ಕೊಡಿಸುವೆ ಎಂದರು.

ಕ್ಷೇತ್ರದಲ್ಲಿ ಆನಂದ ಸಿಂಗ್ ಮತ್ತು ನನ್ನ ಅವಧಿಯಲ್ಲಿ ಹಿಂದು ಳಿದ ಸಮುದಾಯಗಳಿಗೆ ಏನು ಸಹಕಾರ ಬೇಕೋ ಅದನ್ನು ನೀಡುತ್ತಾ ಬಂದಿದ್ದೇವೆ. ವಿದ್ಯಾರ್ಥಿ ಗಳು ಬರೀ ಎಂಬಿಬಿಎಸ್, ಎಂಜಿನಿಯರಿಂಗ್‌ಗಷ್ಟೇ ಆದ್ಯತೆ ನೀಡಬೇಡಿ. ಹೋಟೆಲ್ ಮ್ಯಾನೇಜಮೆಂಟ್, ಟಿವಿ, ಐಟಿ, ಬಿಟಿ, ಮೊಬೈಲ್ ರಿಪೇರಿಯಂತಹ ಕೌಶಲ್ಯಾಭಿವೃದ್ದಿ ತರಬೇತಿ ಪಡೆದು ಉದ್ಯೋಗ ಪಡೆಯಲು ಮುಂದಾಗಿ ಎಂದು ಕಿವಿಮಾತು ಹೇಳಿದರು.

ಪ್ರತ್ಯೇಕ ಜಿಲ್ಲೆಯಿಂದ ಅನುಕೂಲ: ಮಾಜಿ ಸಚಿವ ಆನಂದ ಸಿಂಗ್ ಮಾತನಾಡಿ, ಈ ಭಾಗದಲ್ಲಿ ಹಕ್ಕಬುಕ್ಕರು ವಿಜಯನಗರ ಸಾಮ್ರಾಜ್ಯ ಕಟ್ಟಿದರು. ಅದರಂತೆ ಹಲವಾರು ವರ್ಷಗಳ ಹೋರಾಟದ ನಂತರ ಬಳ್ಳಾರಿಯಿಂದ ಬೇರ್ಪಟ್ಟು ವಿಜಯನಗರ ಜಿಲ್ಲೆಯಾಗಿದೆ. ಇದರಿಂದ ಈ ಭಾಗದ ಜನರಿಗೆ ಅನುಕೂಲವಾಗಿದೆ ಎಂದರು.

ವಿದ್ಯಾರ್ಥಿಗಳಿಗೆ ಹೇಳುವುದಾದರೆ, ಭೂತಕಾಲ ವೇಸ್ಟ್ ಪೇಪರ್ ಇದ್ದಂತೆ, ವರ್ತಮಾನ ಕಾಲ ನ್ಯೂಸ್ ಪೇಪರ್ ಇದ್ದಂತೆ, ಭವಿಷ್ಯತ್ ಕಾಲ ಪ್ರಶ್ನೆ ಪೇಪರ್ ಇದ್ದಂತೆ, ಅದು ಯಾವುದು ಇಲ್ಲದ್ದು ಟಿಸ್ಯೂ ಪೇಪರ್ ಇದ್ದಂತೆ. ಅಂದರೆ ವಿದ್ಯಾರ್ಥಿಗಳು ಕಡಿಮೆ ಅಂಕ, ಫೇಲ್ ಆಗಿದಿನಿ ಅಂತ ಸುಮ್ಮನೇ ಕೂರಬಾರದು. ಪ್ರಯತ್ನ ನಿರಂತರವಾಗಿರಬೇಕು. ಯಾವುದೇ ಕಾರಣಕ್ಕೂ ಕುಗ್ಗಬಾರದು. ಆತ್ಮವಿಶ್ವಾಸ ವಿಟ್ಟುಕೊಂಡು ಚೆನ್ನಾಗಿ ಓದಿ ಉನ್ನತ ಹುದ್ದೆ ಪಡೆದು ತಂದೆ ತಾಯಿಗಳನ್ನು ಚೆನ್ನಾಗಿ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವಿಜಯನಗರ ಗ್ಯಾರಂಟಿ ಯೋಜನೆ ಅನುಷ್ಠಾನ ಅಧ್ಯಕ್ಷ ಕುರಿ ಶಿವಮೂರ್ತಿ, ಹುಡಾ ಮಾಜಿ ಅಧ್ಯಕ್ಷ ಆರ್.ಕೊಟ್ರೇಶ್, ಜಿಲ್ಲಾ ಕುರುಬರ ಸಂಘದ ಸಂಚಾಲಕ ಬುಡ್ಡಿ ಬಸವರಾಜ, ಹುಡಾ ಅಧ್ಯಕ್ಷ ಎಚ್.ಎನ್.ಎಫ್.ಮೊಹಮ್ಮದ್ ಇಮಾಂ ನಿಯಾಜಿ, ಹಂಪಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊ. ಎಫ್. ಟಿ.ಹಳ್ಳಿಕೇರಿ, ರಾಯ ಚೂರು ವಿವಿ ಪ್ರಾಧ್ಯಾಪಕ ಪ್ರೊ. ಕೆ.ವೆಂಕಟೇಶ, ಪ್ರೊ.ರಮೇಶ, ಮಾತನಾಡಿದರು. ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಅಯ್ಯಾಳಿ ತಿಮ್ಮಪ್ಪ ಅಧ್ಯಕ್ಷತೆ ವಹಿಸಿದ್ದರು. 7ನೇ ತರಗತಿ ವಿದ್ಯಾರ್ಥಿ ಅಂತರಾಷ್ಟ್ರೀಯ ಯೋಗ ಪ್ರತಿಭೆ ಶ್ಯಾಮ್ ಯೋಗ ಪ್ರದರ್ಶಿಸಿದ. 200 ಮಂದಿ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕುಲಗುರು ಕೊಟ್ರೇಶ ಒಡೆಯರ್ ಗುರುನಾಥ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಮುಖಂಡರಾದ ಅಯ್ಯಾಳಿ ಮೂರ್ತಿ,ರಾಮಚಂದ್ರಗೌಡ, ಎಲ್.ಎಸ್.ಆನಂದ, ಕೆ.ರವಿಕುಮಾರ್ ಸಾಲಿ ವೆಂಕಟೇಶ, ಎಚ್.ಮಹೇಶ, ವೈ.ಎರಿಸ್ವಾಮಿ, ಪಲ್ಲೇದ ಸಿದ್ದೇಶ, ಜಿಲ್ಲಾ ಹಾಗು ತಾಲೂಕು ಕನಕ ನೌಕರರ ಸಂಘದ ಶಿವರಾಮಪ್ಪ, ಬತ್ತಿ ತಿಮ್ಮಪ್ಪ, ದ್ರಾಕ್ಷಾಯಿಣಿ, ಟಿ.ವಿಶ್ವನಾಥ, ಮಲ್ಲಿಕಾರ್ಜುನ, ಕ್ಯಾದಿಗಿಹಾಳ್ ಉದೇದಪ್ಪ, ಕೆ.ರಮೇಶ, ಎಲ್ಲಾ ತಾಲೂಕಿನ ಕುರುಬರ ಸಂಘದ ಅಧ್ಯಕ್ಷರು ಸೇರಿದಂತೆ ಪಾಲ್ಗೊಂಡಿದ್ದರು.

# ಚಟ್ನಳ್ಳಿ ಗ್ರಾಮದಲ್ಲಿ ಗ್ರಾಮೀಣ ತೋಟಗಾರಿಕೆ ಕಾರ್ಯಾನುಭವ ಶಿಬಿರ ಮುಕ್ತಾಯ



ಬೀದರ, ಮೇ.26

ಬೀದರ ಜಿಲ್ಲೆಯ ಚಟ್ನಳ್ಳಿ ಗ್ರಾಮದಲ್ಲಿ ತೋಟಗಾರಿಕೆ ಮಹಾ ವಿದ್ಯಾಲಯದಿಂದ 2026ರ ಮಾ.02 ರಿಂದ ಮೇ 24ರವರೆಗೆ ಹಮ್ಮಿಕೊಂಡ 84 ದಿನಗಳ ತೋಟಗಾರಿಕೆ ಗ್ರಾಮೀಣ ತೋಟಗಾರಿಕೆ ಕಾರ್ಯಾನುಭವ ಶಿಬಿರ ಭಾನುವಾರ ಮುಕ್ತಾಯಗೊಂಡಿತು.

ಈ ಸಂದರ್ಭದಲ್ಲಿ ತೋಟಗಾರಿಕೆ ವಸ್ತು ಪ್ರದರ್ಶನ ಉದ್ಘಾಟಿಸಿ, ಸಮಗ್ರ ಕೃಷಿ ಜೊತೆಗೆ ಹಣ್ಣು ತರಕಾರಿ ಹಾಗೂ ಪುಷ್ಪೋದ್ಯಮದಂತಹ ತೋಟಗಾರಿಕೆ ಬೆಳೆಗಳನ್ನು ಬೆಳೆದು ರೈತರು ಅಧಿಕ ಲಾಭವನ್ನು ಪಡೆಯಬೇಕೆಂದು ಕಲಬುರಗಿ ಕೃಷಿ ಕಾಲೇಜಿನ ನಿವೃತ್ತ ಡೀನ್ ಡಾ. ಸುರೇಶ್ ಪಾಟೀಲ್ ಹೇಳಿದರು. ಇತ್ತೀಚಿನ ದಿನಗಳಲ್ಲಿ ತೋಟಗಾರಿಕೆ ವಲಯವು ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ಕ್ಷೇತ್ರ ಗಳಲ್ಲೊಂದಾಗಿದೆ. ವಿದ್ಯಾರ್ಥಿಗಳು ಕಾರ್ಯಾನುಭವ ಶಿಬಿರದ ಅವಧಿಯಲ್ಲಿ ಕಲಿತ ಪ್ರಾಯೋಗಿಕ ಕೌಶಲ್ಯವು ಮುಂದಿನ ದಿನಗಳಲ್ಲಿ ಆತ್ಮವಿಶ್ವಾಸ ಹಾಗೂ ವೃತ್ತಿಪರ ಸಾಮರ್ಥ್ಯವನ್ನು ಹೆಚ್ಚಿಸಲು ನೆರವಾಗುತ್ತದೆ ಎಂದರು.

ಸಮಾರೋಪ ಸಮಾರಂಭದ ಅಧ್ಯಕ್ಷತೆಯನ್ನು ತೋಟಗಾರಿಕೆ ಕಾಲೇಜಿನ ಡೀನ್ ಡಾ. ಎಸ್. ವಿ. ಪಾಟೀಲ್ ಮಾತನಾಡಿ, ರೈತರು ತಪ್ಪದೇ ತಮ್ಮ ತಾಕುಗಳ ಮಣ್ಣು ಪರೀಕ್ಷೆ ಮಾಡಿಸಿ, ಅದಕ್ಕನುಗುಣವಾಗಿ ಬೆಳೆಗಳ ಆಯ್ಕೆ ಮಾಡಿಕೊಂಡು ಅಧಿಕ ಇಳುವರಿ ಪಡೆಯಬಹುದೆಂದು ರೈತರಿಗೆ ಸಲಹೆ ನೀಡಿದರು.

ಚಟ್ನಳ್ಳಿ ಸುತ್ತಮುತ್ತಲಿನ ಹಳ್ಳಿಗಳ ರೈತರಿಗೆ ನೆರವಾಗಲು ಶಾಲೆಯಲ್ಲಿ ತೋಟಗಾರಿಕೆ ಇಲಾಖೆ ಮತ್ತು ವಿವಿಧ ಸಂಘ ಸಂಸ್ಥೆಗಳ ಜೈವಿಕ ಕೇಂದ್ರ, ಸಹಯೋಗದಲ್ಲಿ ತೋಟಗಾರಿಕೆ ವಸ್ತು ಪ್ರದರ್ಶನ ಆಯೋಜಿಸಲಾಗಿತ್ತು. ಸಹಾಯಕ ಪ್ರಾಧ್ಯಾಪಕ ಡಾ.ಜಾಹ್ನವಿ ಡಿ.ಆರ್., ಶಿಬಿರದ ವರದಿಯನ್ನು ಓದಿದರು. ತೋಟಗಾರಿಕೆ ಸಂಯೋಜಕ ಡಾ. ಹರೀಶ, ಡಾ. ಫಾರೂಕ್, ಡಾ. ರಾಜಕುಮಾರ್ ಎಮ್., ಡಾ. ವಿಜಯ ಮಹಾಂತೇಶ್, ಅಂಜನೇಯ, ಗ್ರಾಮ ಸ್ಥರು, ಪ್ರಗತಿಪರ ರೈತರು ಕಾರ್ಯ ಕ್ರಮದಲ್ಲಿ ಭಾಗವಹಿಸಿದ್ದರು. ಕು.ಅಂಬಿಕ ಕಾರ್ಯಕ್ರಮ ನಿರೂಪಿಸಿದರು ಹಾಗೂ ಕು. ಅಮಿತ್ ವಂದಿಸಿದರು.

# ಎಲ್ಲಾ ಕಛೇರಿಗಳಲಲ್ಲಿ ಮಾಹಿತಿ ಹಕ್ಕು ಅಧಿನಿಯಮದ ನಾಮಫಲಕ ಅಳವಡಿಸಿ: ಸಿದ್ರಾಮೇಶ್ವರ




ಕೊಪ್ಪಳ,ಮೇ.26-

ಕೊಪ್ಪಳ ಜಿಲ್ಲೆಯ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಮಾಹಿತಿ ಹಕ್ಕು ಅಧಿನಿಯಮ-2005ರ ನಾಮಫಲಕವನ್ನು ಅಳವಡಿಸುವಂತೆ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ ಭವನದ ವಿವಿಧ ಕಛೇರಿಗಳಲ್ಲಿ ಮಾಹಿತಿ ಹಕ್ಕು ಅಧಿನಿಯಮ-2005ರ ನಾಮ ಫಲಕವನ್ನು ಅಳವಡಿಸಿರುವುದಿಲ್ಲ ಎಂದು ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ದೂರುಗಳು ಸ್ವೀಕೃತವಾಗಿದ್ದು, ಜಿಲ್ಲಾಡಳಿತ ಭವನದಲ್ಲಿರುವ ಎಲ್ಲಾ ಕಛೇರಿಗಳು ಹಾಗೂ ತಮ್ಮ ಅಧೀನದಲ್ಲಿ ಬರುವ ಎಲ್ಲಾ ತಾಲ್ಲೂಕು ಕಛೇರಿಗಳಲ್ಲಿ ಕಡ್ಡಾಯವಾಗಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಮಾಹಿತಿಯುಳ್ಳ ನಾಮಫಲಕವನ್ನು ಅಳವಡಿಸುವಂತೆ ಪ್ರಕಟಣೆ

# 27ಕ್ಕೆ 'ನಿಧಿ ಆಪ್ಕೆ ನಿಕಟ್' ಕಾರ್ಯಕ್ರಮ

ಬಳ್ಳಾರಿ,ಮೇ 25- ನಗರದ ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ (ಇಪಿಎಫ್‌ಒ) ಪ್ರಾದೇಶಿಕ ಕಚೇರಿಯ ವತಿಯಿಂದ ಮೇ ಮಾಹೆಯಲ್ಲಿ ಹಮ್ಮಿಕೊಳ್ಳಲಾಗಿದ್ದ 'ನಿಧಿ ಆಪ್ಕೆ ನಿಕಟ್' ಕಾರ್ಯಕ್ರಮದ ದಿನ ಬದಲಾವಣೆ ಮಾಡಲಾಗಿದೆ ಎಂದು ಇಪಿಎಫ್‌ಒ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತರಾದ ಕೆ.ವಿ. ಪ್ರವೀಣ್ ತಿಳಿಸಿದ್ದಾರೆ.

ಪೂರ್ವನಿಗದಿತ ವೇಳಾಪಟ್ಟಿಯಂತೆ ಈ ಕಾರ್ಯಕ್ರಮ ಮೇ 28 ರಂದು ರಂದು ನಡೆಯಬೇಕಾಗಿತ್ತು. ಆದರೆ, ಈದ್- ಉಲ್-ಜುಹಾ (ಬಕ್ರೀದ್) ಹಬ್ಬದ ನಿಮಿತ್ತ ಸರ್ಕಾರಿ ರಜೆ ಘೋಷಿಸಿರುವ ಹಿನ್ನೆಲೆಯಲ್ಲಿ, ಕಾರ್ಯಕ್ರಮವನ್ನು ಒಂದು ದಿನ ಮುಂಚಿತವಾಗಿ ಅಂದರೆ ಮೇ 27 ರಂದು ನಡೆಸಲು ನಿರ್ಧರಿಸಲಾಗಿದೆ.

# ಬಾಲ್ಯವಿವಾಹ ಹಾಗೂ ಅಪ್ರಾಪ್ತರ ಗರ್ಭಧಾರಣೆ ತಡೆಗೆ ಕಠಿಣ ಕ್ರಮಕ್ಕೆ ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಸೂಚನೆ

ಬಳ್ಳಾರಿ,ಮೇ 26

ಜಿಲ್ಲೆಯಲ್ಲಿ ಬಾಲ್ಯವಿವಾಹ ಮತ್ತು ಅಪ್ರಾಪ್ತ ಬಾಲಕಿಯರ ಗರ್ಭಧಾರಣೆ ಪ್ರಕರಣಗಳು ಹೆಚ್ಚುತ್ತಿದ್ದು, ಇದನ್ನು ತಡೆಗಟ್ಟಲು ಪೊಲೀಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಂಟಿಯಾಗಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಸೋಮವಾರ, ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿ ಸಭೆ ಹಾಗೂ ಸಮಗ್ರ ಮಕ್ಕಳ ರಕ್ಷಣಾ ಯೋಜನೆ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಬಾಲ್ಯವಿವಾಹ ಮತ್ತು ಅಪ್ರಾಪ್ತರ ಗರ್ಭಧಾರಣೆಯನ್ನು ನಿಯಂತ್ರಿಸಲು ಸಾಧ್ಯವಾಗದಿರುವುದು ಬಳ್ಳಾರಿ ಜಿಲ್ಲೆಯ ಅತಿ ದೊಡ್ಡ ವೈಫಲ್ಯವಾಗಿದೆ. ಇದನ್ನು ಸಂಪೂರ್ಣವಾಗಿ ನಿಯಂತ್ರಿಸಿದರೆ ಮಾತ್ರ ನಮ್ಮ ಶಿಕ್ಷಣ, ಪೌಷ್ಟಿಕಾಂಶ ಸೇರಿದಂತೆ ಎಲ್ಲಾ ಸಾಮಾಜಿಕ ನಿಯತಾಂಕಗಳು ಸುಧಾರಿಸಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಡಿಸೆಂಬರ್ 2025 ರಿಂದ ಮಾರ್ಚ್ 2026 ರವರೆಗೆ ಜಿಲ್ಲೆಯಲ್ಲಿ ಒಟ್ಟು 96 ಪೋಕ್ಸೋ ಪ್ರಕರಣಗಳು ದಾಖಲಾಗಿವೆ. ಅದರಲ್ಲಿ 02 ನೇರ ಪೋಕ್ಸೋ ಪ್ರಕರಣಗಳು, 92 ಬಾಲ್ಯವಿವಾಹ ಮತ್ತು ಪೋಕ್ಸೋ ಸಂಯೋಜಿತ ಪ್ರಕರಣಗಳು ಮತ್ತು 02 ಪೋಕ್ಸೋ ಜೊತೆಗೆ ಎಸ್ಸಿ /ಎಸ್ಟಿ ಕಾಯ್ದೆಯಡಿ ದಾಖಲಾದ ಪ್ರಕರಣಗಳಾಗಿವೆ. ಅದೇರೀತಿಯಾಗಿ 95 ಪ್ರಕರಣಗಳು ಮಕ್ಕಳ ಕಲ್ಯಾಣ ಸಮಿತಿ ಮುಂದೆ ಬಂದಿದ್ದು, ಈ ಪೈಕಿ 80 ಪ್ರಕರಣಗಳನ್ನು ಇತ್ಯರ್ಥಪಡಿಸಿ ಮಕ್ಕಳನ್ನು ಪೋಷಕರ ವಶಕ್ಕೆ ಒಪ್ಪಿಸಲಾಗಿದೆ. ಇನ್ನುಳಿದ 15 ಪ್ರಕರಣಗಳು ಬಾಕಿ ಇವೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿಂಧೆ ನಂದಿನಿ ಅವರು ಸಭೆಗೆ ತಿಳಿಸಿದರು.

ಏಪ್ರಿಲ್ 2025 ರಿಂದ ಅಕ್ಟೋಬರ್ 2025 ರವರೆಗಿನ ಅವಧಿಯಲ್ಲಿ ಒಟ್ಟು 148 ಅಪ್ರಾಪ್ತರ ಗರ್ಭಧಾರಣೆ ಪ್ರಕರಣಗಳು ವರದಿಯಾಗಿದ್ದು, ಈ ಪೈಕಿ 88 ಪ್ರಕರಣಗಳಲ್ಲಿ ಈಗಾಗಲೇ ಎಫ್‌ಐಆರ್ ದಾಖಲಾಗಿದೆ. ಇನ್ನುಳಿದ ಪ್ರಕರಣಗಳಲ್ಲಿ 19 ಬಾಲಕಿಯರಿಗೆ 18 ವರ್ಷ ತುಂಬಿರುವುದರಿಂದ, ಬಾಕಿ ಉಳಿದ 41 ಪ್ರಕರಣಗಳಲ್ಲೂ ಶೀಘ್ರವಾಗಿ ಕಾನೂನು ಕ್ರಮ ಜರುಗಿಸಲಾಗುವುದು ಎಂದರು.

ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಅಪ್ರಾಪ್ತರ ಗರ್ಭಧಾರಣೆಯ ಪ್ರತಿಯೊಂದು ಪ್ರಕರಣವೂ ಕಾನೂನಿನ ಪ್ರಕಾರ ಪೋಕ್ಸೋ ಕಾಯ್ದೆಯಡಿಯೇ ಬರುತ್ತದೆ. ಇದರಲ್ಲಿ ಪರಸ್ಪರ ಒಪ್ಪಿಗೆಯ ಪ್ರಶ್ನೆಯೇ ಬರುವುದಿಲ್ಲ. ಅಪ್ರಾಪ್ತ ಬಾಲಕಿಯರ ವಿರುದ್ಧ ಲೈಂಗಿಕ ದೌರ್ಜನ್ಯ ನಡೆದಿರುವುದು ಸಾಬೀತಾದರೆ ಅದು ಪೋಕ್ಸೋ ಪ್ರಕರಣವೇ ಆಗುತ್ತದೆ ಎಂದು ಸ್ಪಷ್ಟಪಡಿಸಿದರು.

★ಶಿಡಿಗಿನಮೊಳ ಮತ್ತು ಸಂಡೂರು ಭಾಗಗಳತ್ತ ವಿಶೇಷ ಗಮನ ನೀಡಿ:★

ಸಂಡೂರು ಮತ್ತು ಸಿಡಿಗಿನಮೊಳ ಭಾಗಗಳಲ್ಲಿ ಬಾಲ್ಯವಿವಾಹ ಮತ್ತು ಟೀನೇಜ್ ಪ್ರೆಗ್ನೆನ್ಸಿ ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಇವುಗಳ ವಿರುದ್ಧ ವಿಶೇಷ ಕಾರ್ಯಾಚರಣೆ ನಡೆಸಬೇಕು. ಸಂಡೂರಿನಲ್ಲಿ ಕೇವಲ 32 ಕೆಜಿ ತೂಕವಿದ್ದ 16 ವರ್ಷದ ಅಪ್ರಾಪ್ತ ಬಾಲಕಿಯೊಬ್ಬಳು ಗರ್ಭಿಣಿಯಾಗಿ ಮೃತಪಟ್ಟಿರುವ ತಾಯಂದಿರ ಮರಣದ ಘಟನೆಯನ್ನು ಸಭೆಯಲ್ಲಿ ಪ್ರಸ್ತಾಪಿಸಿ ವಿಷಾದ ವ್ಯಕ್ತಪಡಿಸಿದರು.



ಸಂಡೂರು ತಾಲೂಕಿನ ಮೆಟ್ರಿಕಿ, ವಿಠಲಾಪುರ, ಗಂಗಲಾಪುರ ಸೇರಿದಂತೆ ಬಾಲ್ಯವಿವಾಹದ ಸಮಸ್ಯೆ ಹೆಚ್ಚಿರುವ ಸಮಸ್ಯಾತ್ಮಕ ಗ್ರಾಮ ಪಂಚಾಯತಿ ವ್ಯಾಪ್ತಿಗಳಿಗೆ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಸಭೆ ನಡೆಸಬೇಕು. ಅಲ್ಲಿನ ಎಲ್ಲಾ ಧಾರ್ಮಿಕ ಮುಖಂಡರು ಹಾಗೂ ಮದುವೆ ಮಾಡಿಸುವವರನ್ನು ಕರೆದು ಸಭೆ ನಡೆಸಿ, 'ನಾವು ಯಾವುದೇ ಕಾರಣಕ್ಕೂ ಬಾಲ್ಯವಿವಾಹ ಮಾಡಿಸುವುದಿಲ್ಲ' ಎಂದು ಅವರಿಂದ ಕಡ್ಡಾಯವಾಗಿ ಬಾಂಡ್ ಪೇಪರ್ ಮೇಲೆ ಸಹಿ ಪಡೆದುಕೊಳ್ಳಬೇಕು. ಈ ಪ್ರಕ್ರಿಯೆಯನ್ನು ಮುಂಬರುವ ಜೂನ್ ತಿಂಗಳಿನೊಳಗೆ ಪೂರ್ಣಗೊಳಿಸಬೇಕು ಎಂದು ತಿಳಿಸಿದರು.

ಸಂಡೂರು ತಾಲೂಕು ಆಸ್ಪತ್ರೆಯಿಂದ ಗಂಭೀರ ಸ್ಥಿತಿಯಲ್ಲಿರುವ ಗರ್ಭಿಣಿಯರನ್ನು ಬಳ್ಳಾರಿಯ ಬಿಎಂಸಿಆರ್‌ಸಿ ಆಸ್ಪತ್ರೆಗೆ ಕರೆದೊಯ್ಯಲು ಕನಿಷ್ಠ ಒಂದೂವರೆ ಗಂಟೆ ಸಮಯ ಬೇಕಾಗುತ್ತದೆ. ಈ ವಿಳಂಬವನ್ನು ತಪ್ಪಿಸಲು ಮತ್ತು ತಾಯಿ-ಮಗುವಿನ ಪ್ರಾಣ ರಕ್ಷಿಸಲು, ತೀವ್ರ ತುರ್ತು ಸಂದರ್ಭಗಳಲ್ಲಿ ಗರ್ಭಿಣಿಯರನ್ನು ಹತ್ತಿರದ ಜಿಂದಾಲ್‌ನ ಜೆಎಸ್‌ಡಬ್ಲ್ಯೂ ಸಂಜೀವಿನಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಆರೋಗ್ಯ ಅಧಿಕಾರಿಗಳಿಗೆ ಸೂಚಿಸಿದರು.

★ಜಾಗೃತಿ ಮತ್ತು ಜಂಟಿ ಕಾರ್ಯಾಚರಣೆ ನಡೆಸಿ:★

ಬಾಲ್ಯವಿವಾಹ ತಡೆಗಟ್ಟಲು ಕೇವಲ ಕಾನೂನು ಕ್ರಮ ಮಾತ್ರವಲ್ಲದೆ, ಗ್ರಾಮ ಪಂಚಾಯತ್ ಮಟ್ಟದಲ್ಲಿ ವ್ಯಾಪಕ ಜಾಗೃತಿ ಮೂಡಿಸಬೇಕಿದೆ. ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗ್ರಾಮ ಪಂಚಾಯತ್ ಹಾಗೂ ಕಾವಲು ಸಮಿತಿಗಳು ಜಂಟಿಯಾಗಿ ಕೆಲಸ ಮಾಡಬೇಕು. ಗ್ರಾಮೀಣ ಭಾಗಗಳಲ್ಲಿ ಸಾಕ್ಷ್ಯಚಿತ್ರಗಳ ಪ್ರದರ್ಶನದ ಮೂಲಕ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಬಾಲ್ಯವಿವಾಹ ಅಥವಾ ಪೋಕ್ಸೋ ಪ್ರಕರಣಗಳನ್ನು ದಾಖಲಿಸುವಾಗ ಯಾವುದೇ ರಾಜಕೀಯ ಒತ್ತಡಗಳಿಗೆ ಒಳಗಾಗುವ ಅವಶ್ಯಕತೆಯಿಲ್ಲ. ಶಾಲಾ ದಾಖಲಾತಿಗಳನ್ನು ಪರಿಶೀಲಿಸಿ, ಬಾಲಕಿಯರ ವಯಸ್ಸನ್ನು ದೃಢೀಕರಿಸಿಕೊಂಡು ತಪ್ಪಿತಸ್ಥರ ವಿರುದ್ಧ ಎಫ್‌ಐಆರ್ ದಾಖಲಿಸಬೇಕು. ಜಿಲ್ಲೆಗೆ ಕೆಟ್ಟ ಹೆಸರು ಬರುತ್ತದೆ ಎಂಬ ಕಾರಣಕ್ಕೆ ಪ್ರಕರಣಗಳನ್ನು ಮುಚ್ಚಿ ಹಾಕುವ ಪ್ರಯತ್ನ ಮಾಡಬಾರದು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಅವರು, ಬಾಲ್ಯವಿವಾಹ ಕಾಯ್ದೆಯನ್ನೂ ಕಟ್ಟುನಿಟ್ಟಾಗಿ ಜಾರಿಗೊಳಿಸಿ, ಎಫ್‌ಐಆರ್ ದಾಖಲಿಸಿ ಆರೋಪಿಗಳಿಗೆ ಕಾನೂನಿನ ಭಯ ಹುಟ್ಟಿಸಿದರೆ ಮಾತ್ರ ಈ ಸಾಮಾಜಿಕ ಪಿಡುಗನ್ನು ತಡೆಯಲು ಸಾಧ್ಯ ಎಂದರು. ಖಾಸಗಿ ಆಸ್ಪತ್ರೆಗಳು ಹಾಗೂ ಆರೋಗ್ಯ ಕೇಂದ್ರಗಳಲ್ಲಿ ದಾಖಲಾಗುವ ಅಪ್ರಾಪ್ತರ ಗರ್ಭಧಾರಣೆಯ ದತ್ತಾಂಶಗಳನ್ನು ಕಡ್ಡಾಯವಾಗಿ ಸಂಗ್ರಹಿಸಬೇಕು. ಆರ್‌ಸಿಎಚ್ ಪೋರ್ಟಲ್‌ನಲ್ಲಿ ಈ ಮಾಹಿತಿ ನಿಖರವಾಗಿರಬೇಕು. ಪ್ರತಿ ತಿಂಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಈ ಅಪ್ರಾಪ್ತರ ಗರ್ಭಧಾರಣೆಯ ಮಾಹಿತಿಯನ್ನು ಪೊಲೀಸ್ ಇಲಾಖೆಯೊಂದಿಗೆ ಹಂಚಿಕೊಳ್ಳಬೇಕು. ಮುಂದಿನ ಸಭೆಯ ವೇಳೆಗೆ ಪೊಲೀಸ್ ಇಲಾಖೆಯು ಇಂತಹ ಎಷ್ಟು ಪ್ರಕರಣಗಳಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ ಮತ್ತು ಎಷ್ಟು ಪ್ರಕರಣಗಳು ಸತ್ಯಾಸತ್ಯತೆಯಿಂದ ಕೂಡಿವೆ ಎಂಬುದರ ಸಂಪೂರ್ಣ ವರದಿ ಸಲ್ಲಿಸಬೇಕು ಎಂದು ಅಧಿಕಾರಿಗಳು ಸೂಚಿಸಿದರು.

ಹಾಸ್ಟೆಲ್‌ಗಳ (ವಿಶೇಷವಾಗಿ ಖಾಸಗಿ ಹಾಸ್ಟೆಲ್‌ಗಳು) ವಿದ್ಯಾರ್ಥಿಗಳ ಸುರಕ್ಷತೆ ಮತ್ತು ತುರ್ತು ಸೇವೆಗಳ ಲಭ್ಯತೆಯ ಕುರಿತು ವಿದ್ಯಾರ್ಥಿಗಳಿಗೆ ತಮ್ಮ ದೂರು ನೀಡಲು ಸೂಕ್ತ ವ್ಯವಸ್ಥೆ ಇರಬೇಕು. ಕೆಲವು ಹಾಸ್ಟೆಲ್‌ಗಳಲ್ಲಿ (ಸರ್ಕಾರಿ ಮತ್ತು ಖಾಸಗಿ) ಮಕ್ಕಳಿಗೆ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದ್ದು,

ಅದರಲ್ಲಿ ಮೊದಲೇ ಸೇವ್ ಆಗಿರುವ ಕೇವಲ ಎರಡು ಸಂಖ್ಯೆಗಳಿಗೆ ಮಾತ್ರ ಕರೆ ಮಾಡಲು ಅವಕಾಶವಿರುತ್ತದೆ. ಈ ವ್ಯವಸ್ಥೆಯಲ್ಲಿ ಪ್ರಮುಖ ಸಹಾಯವಾಣಿ ಸಂಖ್ಯೆಯಾದ 1098 ಲಭ್ಯವಿರುವುದಿಲ್ಲ ಎಂಬ ಕೊರತೆ ಕೇಳಿಬಂದಿವೆ. ಈ ಸಮಸ್ಯೆಯನ್ನು ಕೇವಲ ಒಬ್ಬರೇ ಪರಿಹರಿಸಲು ಸಾಧ್ಯವಿಲ್ಲದ ಕಾರಣ, ವಿವಿಧ ಕಲ್ಯಾಣ ಇಲಾಖೆಗಳು ಒಟ್ಟಾಗಿ ಕೆಲಸ ಮಾಡಬೇಕೆಂದು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಬಳ್ಳಾರಿ ನಗರ ಡಿವೈಎಸ್ಪಿ ಗೋವಿಂದರಾಜು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆ ವಿಜಯಲಕ್ಷ್ಮಿ ಮೈದೂರು ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಡಿಪಿಒ ಅಧಿಕಾರಿಗಳು ಹಾಗೂ ವಿವಿಧ ಎನ್‌ಜಿಒ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.



# ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರ 135ನೇ ಜಯಂತಿ ಅಂಗವಾಗಿ ವೈಭವದ ಬೈಕ್ ರ್‍ಯಾಲಿ

ಬಾಗಲಕೋಟ,,ಮೇ 26

ನಗರದಲ್ಲಿ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರ 135ನೇ ಜಯಂತಿ ಅಂಗವಾಗಿ ಸೋಮವಾರ ವೈಭವದ ಬೃಹತ್ ಬೈಕ್ ರ್‍ಯಾಲಿ ನಡೆಯಿತು. ಸತ್ಯ ಶೋಧಕ ಸಂಘ ಕರ್ನಾಟಕ ರಾಜ್ಯಾಧ್ಯಕ್ಷರು, ಜಿಲ್ಲಾಧ್ಯಕ್ಷರು, ಹಾಗೂ ಸಾಮ್ರಾಟ ಅಶೋಕ ಕ್ರೀಡಾ ಸಂಸ್ಥೆ, ಹಿರಿಯರು, ಯುವಕರು ಹಾಗೂ ಅಂಬೇಡ್ಕರ್ ಅಭಿಮಾನಿಗಳು ನೂರಾರು ಬೈಕ್‌ಗಳೊಂದಿಗೆ ರ್‍ಯಾಲಿಯಲ್ಲಿ ಭಾಗವಹಿಸಿ ಜಯಭೀಮ್ ಘೋಷಣೆಗಳನ್ನು ಕೂಗಿದರು.

ಅಂಬೇಡ್ಕರ್ ನಗರದಿಂದ ಆರಂಭವಾದ ಬೈಕ್ ರ್‍ಯಾಲಿ ಪಂಕಾ ಮಸಜಿದ್, ಪೋಲಿಸ್ ಚೌಕ್, ಮಾರ್ಗವಾಗಿ ಬಸವೇಶ್ವರ ಸರ್ಕಲ್, ಅಂಬೇಡ್ಕರ ರವರ ವೃತ್ತದಿಂದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ, ಕೊನೆಗೆ ನವನಗರದಲ್ಲಿರುವ ಡಾ. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ಸಮಾಪ್ತಿಯಾಯಿತು. ಭಾಗವಹಿಸಿದವರು ಸಂವಿಧಾನದ ಮಹತ್ವ ಹಾಗೂ ಸಮಾನತೆಯ ಸಂದೇಶವನ್ನು ಜನರಿಗೆ ಸಾರಿದರು.

ಈ ಸಂದರ್ಭದಲ್ಲಿ ಸತ್ಯ ಶೋಧಕ ಸಂಘದ ರಾಜ್ಯಾಧ್ಯಕ್ಷರಾದ ಪರಶುರಾಮ ಮಹಾರಾಜನವರ ಅವರು ಮಾತನಾಡಿ, ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರು ದೇಶಕ್ಕೆ ನೀಡಿದ ಸಂವಿಧಾನ ಎಲ್ಲರಿಗೂ ಸಮಾನ ಹಕ್ಕುಗಳನ್ನು ಕಲ್ಪಿಸಿದೆ ಎಂದು ಹೇಳಿದರು.

ಜಿಲ್ಲಾಧ್ಯಕ್ಷರಾದ ಅರುಣ ಗರಸಂಗಿ ಅವರು ಮಾತನಾಡಿ ಯುವಕರು ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕೊನೆಯಲ್ಲಿ ಮಹಿಳೆಯರು ಬಸವೇಶ್ವರ ಕಾಲೇಜದಿಂದ ಅಂಬೇಡ್ಕರ ನಗರದವರೆಗೆ ಮಂಗಳಾರತಿಯೊಂದಿಗೆ ಬೈಕ್ ರ್‍ಯಾಲಿ ಬರ ಮಾಡಿಕೊಂಡರು.

ರ್‍ಯಾಲಿಯಲ್ಲಿ ನಗರದ ಹಿರಿಯರಾದ ರಾಮಪ್ಪ ನಾರಾಯಣಿ, ಗಿರಿಯಪ್ಪ ನಾರಾಯಣಿ, ದೀಲಿಪ ಡವಳೇಶ್ವರ, ಬಂಡೆಪ್ಪ ನಾರಾಯಣಿ, ಮುತ್ತಪ್ಪ ಆರೆತ್ತಿನವರ, ರಾಮು ನಾರಾಯಣಿ, ಕಿರಣ ನೀಲನಾಯಕ, ರಾಮಣ್ಣ ಹೊಸಳ್ಳಿ, ಸುನೀಲ ಬಂಡಿ, ಸಿದ್ದಣ್ಣ ಮಾವಿನತೋಟ, ಕುಮಾರ ಬಿಚ್ಚೇಲಿ, ನಿಂಗಪ್ಪ ಅಂಬಿಗೇರ ಮತ್ತು ಮಕ್ಕಳು, ಮಹಿಳೆಯರು, ಯುವಕರು ಹಾಗೂ ದಲಿತಪರ ಸತ್ಯ ಶೋಧಕ ಸಂಘ ಕರ್ನಾಟಕ ಹಾಗೂ ಸಾಮ್ರಾಟ ಅಶೋಕ ಕ್ರೀಡಾ ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದ ವೇಳೆ ಪೊಲೀಸ್ ಇಲಾಖೆ ಅಗತ್ಯ ಭದ್ರತಾ ಕ್ರಮಗಳನ್ನು ಕೈಗೊಂಡಿತ್ತು.

**ಒಂದನೇಯ ಪುಟದಿಂದ**

## ದಿ.30:ಮತದಾರರ ತೀವ್ರ ಪರಿಷ್ಕರಣೆ ಎಸ್ಐಆರ್ ವಿರೋಧಿಸಿ ಪ್ರತಿಭಟನೆ

ನಿಲ್ಲಿಸಬೇಕು ಎಂದರು. ಅರ್ಹ ಇರುವ ಮತದಾರರನ್ನು ಮತದಾರ ಪಟ್ಟಿಯಿಂದ ಕೈ ಬಿಡದಂತೆ ನೋಡಿಕೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ. ನುಸುಲುಕೊರರ ಹೆಸರಲ್ಲಿ ಅರ್ಹ ಮತದಾರರನ್ನು ಪಟ್ಟಿಯಿಂದ ಹೊರಗಿಡುವ ಕೇಂದ್ರ ಸರಕಾರ ಹುನ್ನಾರ ಆಗಿದೆ ಎಂದರು.

ಈ ಸಂದರ್ಭದಲ್ಲಿ ಚಾಮರಾಸ ಮಾಲಿಪಾಟೀಲ್, ಅಸಮುದ್ದಿನ್, ಜಾನ್ ವೇಸ್ಲಿ, ಶರಣಕುಮಾರ, ಈಜಿದ್ ಅಲಿ, ಬಸವರಾಜ, ಮಾರೆ ಪ್ಪ ಹರವಿ ಸೇರಿದಂತೆ ಉಪಸ್ಥಿ ತರಿದ್ದರು.

## ಕೋಮುವಾದಿ ಗೂಂಡಾಗಳ ಮೇಲೆ ಪ್ರಕರಣ ಹಿಂಪಡೆಯುವ ನಿರ್ಧಾರ ಖಂಡಿಸಿ ಪ್ರತಿಭಟನೆ

ಇಲ್ಲಿ ರಾಜ್ಯ ಸರಕಾರ ಅಮಾಯಕರ ಮೇಲಿನ ಕೇಸುಗಳನ್ನು ಹಿಂಪಡೆದದ್ದು ಅಥವಾ ಕನ್ನಡ ಪರ ಸಂಘ ಹೋರಾಟಗಾರರ ಕೇಸುಗಳನ್ನು ಹಿಂಪಡೆದದ್ದು, ರೈತರ ಹೋರಾಟ, ರೈತ ಪರ ಹೋರಾಟಗಾರರ ಕೇಸುಗಳನ್ನು ಹಿಂಪಡೆದದ್ದನ್ನು ನಾವು ಸ್ವಾಗತಿಸುತ್ತೇವೆ. ಅದೇ ಸಂದರ್ಭದಲ್ಲಿ ಪುನರಾವರ್ತಿತವಾಗಿ ನಿರಂತರವಾಗಿ ಕೋಮು ಪ್ರಚೋದನೆ ಮಾಡುವಂತಹ, ಕೋಮು ಘರ್ಷಣೆಗೆ, ಕೋಮು ಗಲಭೆಗಳಿಗೆ ಉತ್ತೇಜಿಸುವಂತಹ ರೀತಿಯಲ್ಲಿ ಅಥವಾ ದೇಶದ ವಿರುದ್ಧ ರೀತಿಯಲ್ಲಿ ಹೇಳಿಕೆ ಕೊಡುವಂತಹ ಬಿಜೆಪಿ ಸಂಘ ಪರಿವಾರದ ನಾಯಕರ ಮೇಲಿನ ಕೇಸುಗಳನ್ನು ಹಿಂಪಡೆದಿರುವುದನ್ನು ಒಪ್ಪಲಿಕ್ಕೆ ಸಾಧ್ಯವಿಲ್ಲ ಎಂದರು.

## ಸೊಳ್ಳೆಯಿಂದ ಹರಡುವ ಖಾಯಿಲೆಗಳ ತಡೆಗೆ ಸಾರ್ವಜನಿಕರು ಸಹಕರಿಸಿ: ಡಾ.ಸುರೇಂದ್ರ ಬಾಬು

ನೀರು ಸಂಗ್ರಹವಾಗುವ ಪ್ಲಾಸ್ಟಿಕ್ ಕಪ್, ತಗಡಿನ ಟಿನ್, ತೆಂಗಿನ ಚಿಪ್ಪು, ಒಡೆದ ಮಡಿಕೆ, ಬಿಸಾಡಿದ ಟೈರ್, ಮುಂತಾದ ತ್ಯಾಜ್ಯವನ್ನು ವಿಲೇವಾರಿ ಮಾಡುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಮನೆಯಲ್ಲಿರುವ ಚಿಕ್ಕ ಮಕ್ಕಳು, ಗರ್ಭಿಣಿಯರು, ವಯೋವೃದ್ದರು, ಬಾಣಂತಿಯರಿಗೆ ಸೊಳ್ಳೆ ಕಡೆಯದಂತೆ ಕಾಳಜಿ ತೆಗೆದುಕೊಳ್ಳಿ ನಿರ್ಲಕ್ಷ್ಯ ವಹಿಸಬಾರದು.

ತಕ್ಷಣ ಪರೀಕ್ಷೆ ಮಾಡಿಸಿಕೊಳ್ಳಿ: ಸಾಮಾನ್ಯವಾಗಿ ಜ್ವರವನ್ನು ನಾವು ನಿರ್ಲಕ್ಷಿಸುತ್ತೇವೆ. ಇಂತಹ ಸಂದರ್ಭಗಳಲ್ಲಿ ಡೆಂಗ್ಯು ಸಂಬಂಧಿತ ಜ್ವರವಾಗಿದ್ದರೆ ರೋಗಿಯು ಪ್ಲೇಟ್‌ಲೆಟ್ಸ್ ಗಳ ಶೀಘ್ರ ಕುಸಿಯುವಿಕೆಯಿಂದ ಆರೋಗ್ಯ ಸಮಸ್ಯೆ ಎದುರಾಗಿ ರಕ್ತಸ್ರಾವದಂ ತಹ ಗಂಭಿರ ಸಮಸ್ಯೆ ಎದುರುಸ ಬೇಕಾಗಬಹುದು. ಕಾರಣ ಯಾರಿ ಗಾದರೂ 3 ದಿನಗಳ ಕಡಿಮೆಯಾಗದ ಜ್ವರ, ವಿಪರೀತ ತಲೆನೋವು, ಕಣ್ಣುಗಳ ಹಿಂಭಾಗದಲ್ಲಿ ನೋವು, ಮಾಂಸಖಂಡ ಮತ್ತು ಕೀಲುಗಳಲ್ಲಿ ವಿಪರೀತ ನೋವು ಕಾಣಿಸಿಕೊಂಡಲ್ಲಿ ನಿರ್ಲಕ್ಷಿಸಿದೆ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಬೇಟಿ ನೀಡಿ ಅಗತ್ಯ ಪರೀಕ್ಷೆ ಮಾಡಿಸಿ ವೈದ್ಯರ ಸಲಹೆಯಂತೆ ಲಕ್ಷಣಗಳ ಆಧಾರದ ಮೇರೆಗೆ ಚಿಕಿತ್ಸೆ ಪಡೆಯಬೇಕು.

ಲಾರ್ವಾ ಸಮೀಕ್ಷೆಗೆ ಸಹಕರಿಸಿ: ಜಿಲ್ಲಾ ರೋಗ ವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರಯ್ಯ ಸ್ವಾಮಿ ಅವರ ನೇತೃತ್ವದಲ್ಲಿ ಪ್ರತಿ ಮಂಗಳವಾರ ಹಾಗೂ ಶುಕ್ರವಾರ ದಂದು ಸೊಳ್ಳೆಗಳ ಉತ್ಪತ್ತಿ ತಾಣಗಳನ್ನು ಗುರ್ತಿಸಿ ನಾಶಗೊಳಿಸಲು ಸಿಬ್ಬಂದಿಯವರಿಂದ ಲಾರ್ವಾ ಸಮೀಕ್ಷೆ ಕೈಗೊಳ್ಳಲಾಗುತ್ತಿದ್ದು, ಸಾರ್ವಜನಿಕರು ಪರಿಕರಗಳಿಗೆ ಮುಚ್ಚಳ ಮುಚ್ಚಿ ಬಟ್ಟೆ ಕಟ್ಟಿ, ಬಳಕೆ ಮಾಡದ ನೀರು ಸಂಗ್ರಹಕಗಳಿಗೆ ಕೊಬ್ಬರಿ ಎಣ್ಣೆಯನ್ನು ಹಾಕುವ ಮೂಲಕ ಸೊಳ್ಳೆ ಉತ್ಪತ್ತಿ ತಡೆಯಬೇಕು.

ಬಳಸದಿರುವ ನೀರು ನಿಲ್ಲುವ ಸ್ಥಳಗಳಲ್ಲಿ ಸುಟ್ಟ ಆಯಿಲ್ ಹಾಕಲು ಹಾಗೂ ಅಗತ್ಯವಿರುವಲ್ಲಿ ಟೆಮೋಪಾಸ್ ದ್ರಾವಣ ಹಾಕಲು ಕ್ರಮ ವಹಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೇನೆಯನ್ನು ಸೇರಿರಿ ದೇಶದ ರಕ್ಷಣೆಗೆ ದುಡಿಯಿರಿ ಡಾ. ಬಿರಾದಾರ

ಕ್ರಾಸ್ ಸಂಸ್ಥೆಯ ಶಿಕ್ಷಣ ವಿಭಾಗದ ಜಿಲ್ಲಾ ಸಂಚಾಲಕರಾದ ಡಾ. ದಂಡಪ್ಪ. ಬಿರಾದಾರ ಮಾತನಾಡಿದರು. ಕಾರ್ಯಕ್ರಮದ ಪ್ರಾರಂಭದಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷರಾದ ಚೆನ್ನಾ ರೆಡ್ಡಿ ಅವರು ಕಾರ್ಯಕ್ರಮದ ರೂಪರೇಶಿಗಳ ಕುರಿತು ಪ್ರಾಸ್ತಾವಿಕವಾಗಿ ಮಾತನಾಡುತ್ತಿಃ ನಮ್ಮ ಭಾಗದ ಯುವಕ ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಈ ಒಂದು ಅಗ್ನಿವೀರ ಸ್ಪರ್ಧೆಯಲ್ಲಿ ಭಾಗವಹಿಸಿ ಹೆಚ್ಚು ಜನ ಯಶಸ್ವಿಯಾಗಿ ಈ.ಒಂದು ಸೇನೆಯ ಕಾರ್ಯನಿರ್ವಹಿಸಲು ಅನುಕೂಲವಾಗಲಿ ಎಂಬ ದೃಷ್ಟಿಕೋನದಿಂದ ಈ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ .ಮುಂದಿನ ದಿನ ಮತ್ತೊಂದು ಸಲ ಈ ಕಾರ್ಯವನ್ನು. ಆಯೋಜನೆಯನ್ನು ಮಾಡಲಾಗುತ್ತದೆ .ಎಂದು ಹೇಳಿದರು .ನಂತರ ಈ ಅಗ್ನಿವೀರ ನೇಮಕಾತಿ ಇದರಲ್ಲಿ ಅಭ್ಯರ್ಥಿಗಳು ಪಾಲಿಸಬೇಕಾದ ಅಂಶಗಳ ಕುರಿತು ಸುಬೇದಾರ್ ಮಣಿಸಿಂಗ್. ಹವಲ್ದಾರ್ ದಿಲೀಪ್ ಅವರು ಮಾಹಿತಿಯನ್ನು ನೀಡಿದರು. ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಪದಾಧಿಕಾರಿಗಳಾದ ದೇವರೆಡ್ಡಿ .ಕೆ.ಎಸ್. ರಾವ್ ನರಸಿಂಹಲು. ಸಿದ್ದಯ್ಯ ಸ್ವಾಮಿ ಹಾಗೂ ಎನ್ ಸಿ.ಸಿ.ಯ ಅಧಿಕಾರಿಗಳು ಹಾಗೂ ಅಲಿಮ ಮಲಬಾರ್ ಉಪಸ್ಥಿತರಿದ್ದರು.

## ಸಮಾಜದಲ್ಲಿ ಪತ್ರಕರ್ತರ ಸೇವೆ ಶ್ಲಾಘನೀಯ




ಸುರಪುರ,ಮೇ.25-

ಸಮಾಜದಲ್ಲಿ ಶಾಂತಿ ನೆಲಿಸಲು ಪತ್ರಕರ್ತರ ಅಮೋಘ ಸೇವೆ ಕಾರ ಣವಾಗಿದ್ದು, ಸಮಾಜದಲ್ಲಿ ಪತ್ರಕ ರ್ತರ ಸೇವೆ ತುಂಬಾ ಶ್ಲಾಘನೀ ಯವಾಗಿದೆ ಎಂದು ಸಾಮಾಜಿಕ ವಲಯ ಅರಣ್ಯ ಸಿಬ್ಬಂದಿ ಮಾನಪ್ಪ ಬೂದಗುಂಪಿ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುರಪುರ ಪತ್ರಕರ್ತರನ್ನು ಸನ್ಮಾನಿಸಿ ಮಾತನಾಡಿ, ನನ್ನ ಜೀವನದ ಹೋರಾಟದ ಉದ್ದಕ್ಕೂ ಪತ್ರಕರ್ತರ ಕೊಡಗೆ ಅಪಾರವಾಗಿದೆ. ಪತ್ರಕರ್ತ ರು ನಮ್ಮನ್ನು ಕೆಲಸದಿಂದ ತೆಗೆದರು. ಕಲಬುರ್ಗಿಯಲ್ಲಿ ನಿರಂತರವಾಗಿ ಹೋರಾಟ ಮಾಡಿದ್ದನ್ನು ಬಿತ್ತರಿಸಿ ದರು. ಪತ್ರಕರ್ತರು ನಮ್ಮ ಬೆನ್ನಿಗೆ ನಿಂತು ಪ್ರತಿಭಟನೆಯನ್ನು ಸರ್ಕಾರಕ್ಕೆ ತಲುಪಿಸಿದ್ದರಿಂದಲೇ ನಾನು ಇಂದು ಅರಣ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತ ಅಂಚಿನಲ್ಲಿದ್ದೇನೆ. ಪತ್ರಕರ್ತ ರನ್ನು ಮರೆಯಲು ಸಾಧ್ಯವಿಲ್ಲ ಎಂದರು.

ಕಲಬುರಗಿಯಲ್ಲಿ ನಡೆದ ಹೋರಾಟದ ಫಲವಾಗಿ ನಮ್ಮ ಸಂಬಳದಲ್ಲೂ ಏರಿಕೆಯಾಯಿತು. ನೌಕರಿ ಉಳಿಸಿಕೊಳ್ಳಲು ಸಾಕಷ್ಟು ಹೋರಾಟ ಮಾಡಿದೆವು. ಅರಣ್ಯ ಸಿಬ್ಬಂದಿ ಪರವಾಗಿ ಪತ್ರಕರ್ತರು ವರದಿಯನ್ನು ಬಿತ್ತರಿಸಿದರು. ಇದರ ಫಲವಾಗಿ 2014ರಲ್ಲಿ ಅರಣ್ಯ ಇಲಾಖೆಯಲ್ಲಿ ದಿನಗೂಲಿ ನೌಕರ ರಿಂದ ಕಾಯಂ ನೌಕರರಾದೆವು. ಪತ್ರಕರ್ತರ ಸಹಕಾರವನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದು ಹೇಳಿದರು.

ಕಕ್ಕೇರಾದ ಹಿರಿಯ ಪತ್ರಕರ್ತ ಮಹಾಂತೇಶ ಹೊಗರಿ ಮಾತನಾಡಿ, ಅರಣ್ಯ ಇಲಾಖೆ ಸಿಬ್ಬಂದಿ ಮಾನಪ್ಪ ಬುದುಗುಂಪಿಯವರು 1988ರಿಂದ ಲೂ ಉತ್ತಮ ಸೇವೆಯನ್ನು ಸಲ್ಲಿಸು ತ್ತಾ ಬಂದಿದ್ದಾರೆ. ಕಕ್ಕೇರಾ, ಹುಣಸಿ ಹೊಳೆ, ಲಿಂಗದಳ್ಳಿ, ಹೊಸೂರು, ದೇವಾಪುರ, ತಿಂಥಣಿಯಲ್ಲಿ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ಮರಗಳನ್ನು ನೆಟ್ಟು ಬೆಳೆಸಿ ಪೋಷಿ ಸಿದ್ದಾರೆ. ಅವರು ಸಾಲ ಮರದ ತಿಮ್ಮಕ್ಕನ ನಂತರ ಬರುವ ಸ್ಥಾನ ಮಾನಪ್ಪನವರದ್ದಾಗಿದೆ ಎಂದರು.

ಮೌನೇಶ್ವರ ದೇಗುಲ, ಕಕ್ಕೇರಾ ಸೋಮನಾಥ ದೇವಸ್ಥಾನದಲ್ಲಿಯೂ ಮರಗಳನ್ನು ನೆಟ್ಟು ಪೋಷಿಸಿದ್ದಾರೆ. ಮರಗಳನ್ನು ಮಕ್ಕಳಂತೆ ಪೋಷಿಸಿ ದ್ದಾರೆ. ಮಾನಪ್ಪನವರು ಮಾತನಾಡು ವಾಗ ಕಣ್ತುಂಬಿ ಬಂದಿದ್ದೇ ಅದಕ್ಕೆ ಸಾಕ್ಷಿ. ಅರಣ್ಯ ಇಲಾಖೆಯು ಅತ್ಯು ತ್ತಮ ಶ್ರೇಷ್ಠ ಪ್ರಶಸ್ತಿಯನ್ನು ನೀಡ ಬೇಕು ಎಂದು ಮನವಿ ಮಾಡಿದರು.

ಸನ್ಮಾನ: 38 ವರ್ಷಗಳ ಕಾಲ ಯಾವುದೇ ಲೋಪ ಇಲ್ಲದೆ ಅರಣ್ಯ ರಕ್ಷಣೆಗೆ ಸೇವೆ ಸಲ್ಲಿಸಿದ ಮಾನಪ್ಪ ಬೂದುಗುಂಪಿ ಅವರನ್ನು ಪತ್ರ ಕರ್ತರು ಸನ್ಮಾನಿಸಿ ಗೌರವಿ ಸಿದರು.

ಹಿರಿಯ ಪತ್ರಕರ್ತರಾದ ಗಿರೀಶ ಶಾಬಾದಿ, ಸಿದ್ದಯ್ಯ ಪಾಟೀಲ್, ನಾಗರಾಜ ನ್ಯಾಮತಿ ಪರಶು ರಾಮ್ ಮಲ್ಲಿಭಾವಿ, ಶ್ರೀಮಂತ ಚಲವಾದಿ, ಕ್ಷೀರಲಿಂಗಯ್ಯ ಬೋನಾ ಳ, ಚಂದ್ರಶೇಖರ್ ಉಸ್ಮಾನ್ ಚಿತ್ತಾಪುರ, ವೆಂಕಟೇಶ ಯಾದವ್, ಮ್ಯಾಥ್ಯೂ ಥಾಮಸ್ ಅವರನ್ನು ಮಾನಪ್ಪ ಬೂದಗುಂಪಿ ಸನ್ಮಾನಿ ಸಿದರು. ಆರಾಧ್ಯ ವಾಣಿ ಸಂಪಾದಕ ಕ್ಷೀರಲಿಂಗಯ್ಯ ಬೋನಾಳ ನಿರೂ ಪಿಸಿ ವಂದಿರು.

## ಮಕ್ಕಳ ಮೇಲಿನ ದೌರ್ಜನ್ಯ ತಡೆ: ಹಿಟ್ನಾಳ ಗ್ರಾಮದಲ್ಲಿ ಜನಸಂಪರ್ಕ ಸಂವಾದ ಕಾರ್ಯಕ್ರಮ




ಕೊಪ್ಪಳ ಮೇ 25-

ಜಿಲ್ಲಾಡಳಿತ, ಜಿಲ್ಲಾ ಪೋಲಿಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕೊಪ್ಪಳ ಮತ್ತು ಹಿಟ್ನಾಳ ಗ್ರಾಮ ಪಂಚಾಯತ್ ಇವರುಗಳ ಸಂಯುಕ್ತಾ ಶ್ರಯದಲ್ಲಿ ಇತ್ತೀಚೆಗೆ ಹಿಟ್ನಾಳ ಗ್ರಾಮದಲ್ಲಿ ಮಕ್ಕಳ ಮೇಲಿನ ದೌರ್ಜನ್ಯ ತಡೆಗಾಗಿ ಜನಸಂಪರ್ಕ ಸಂವಾದ ಕಾರ್ಯಕ್ರಮ ಜರುಗಿತು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಮಾಜ ಕಾರ್ಯಕರ್ತೆ ಪ್ರತಿಭಾ ಕಾಶಿಮಠ ಅವರು ಮಾತನಾಡಿ, ಇತ್ತೀಚೆಗೆ ಮಕ್ಕಳು ಮಾಧ್ಯಮಗಳ ಪ್ರಭಾವದಿಂದ ಪ್ರೀತಿ, ಪ್ರೇಮದ ಹೆಸರಿನಲ್ಲಿ ತಿಳಿದೊ, ತಿಳಿಯದೆಯೋ ಈ ಕಾಯ್ದೆಯಲ್ಲಿ ಸಿಲುಕುತ್ತಿದ್ದಾರೆ. ಅಲ್ಲದೇ ಅಪ್ರಾಪ್ತ ವಯಸ್ಸಿ ನ ಮಕ್ಕಳಿಗೆ ಮದುವೆಯನ್ನು ಮಾಡಿದಂತವರು, ಭಾಗಿಯಾದವರು, ಪ್ರೋತ್ಸಾ ಹಿಸಿದವರು ಬಾಲ್ಯವಿವಾಹ ನಿಷೇಧ ಕಾಯ್ದೆ ಮತ್ತು ಈ ಕಾಯ್ದೆಯಲ್ಲಿ ಸಿಲುಕಿ ಜೈಲು ಶಿಕ್ಷೆಯನ್ನು ಅನುಭವಿಸುತ್ತಿದ್ದಾರೆ. ತಾಯಿ ಮರಣ, ಶಿಶು ಮರಣ, ಅಪೌಷ್ಠಿಕ ಮಕ್ಕಳ ಜನನ ನಿರ್ಮೂಲನೆಗಾಗಿ ಸರಕಾರವು ಬಾಲ್ಯವಿವಾಹ ನಿಷೇಧ ಕಾಯ್ದೆಯನ್ನು ಜಾರಿಗೊಳಿಸಿದೆ. ಅದರನ್ವಯ 18 ವರ್ಷದೊಳಿನ ಹೆಣ್ಣು ಮಗುವಿಗೆ ಮತ್ತು 21 ವರ್ಷದೊಳಗಿನ ಗಂಡು ಮಗುವಿಗೆ ವಿವಾಹವನ್ನು ಮಾಡುವುದನ್ನು ನಿಷೇಧಿಸಿದೆ ಎಂದರು.

ರಾಜ್ಯವನ್ನು ಬಾಲ್ಯವಿವಾಹ ಮುಕ್ತ ರಾಜ್ಯವನ್ನಾಗಿಸಲು ಕರ್ನಾಟಕ ರಾಜ್ಯ ಸರಕಾರವು ಕರ್ನಾಟಕ ತಿದ್ದುಪಡಿಯನ್ನು ತಂದಿದ್ದು, ಅದರನ್ವಯ ರಾಜ್ಯದಲ್ಲಿ ಬಾಲ್ಯ ವಿವಾಹಗಳು ಅಸಿಂಧು ವಿವಾಹಗಳಾಗಿವೆ. ಬಾಲ್ಯವಿವಾಹವನ್ನು ಮಾಡುವವರು, ಭಾಗವಹಿಸುವವರು, ಆಯೋಜಿಸುವವರು ಎಲ್ಲರಿಗೂ ಕನಿಷ್ಠ 1 ವರ್ಷದಿಂದ 2 ವರ್ಷ ಗಳವರೆಗೆ ಜೈಲು ಶಿಕ್ಷೆಯನ್ನು ವಿಧಿಸಬಹು ದಾಗಿದೆ. ಆದ್ದರಿಂದ ಬಾಲ್ಯವಿವಾಹಗಳನ್ನು ಮಾಡಬೇಡಿ, ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಸಹಕರಿಸಿ ಎಂದು ತಿಳಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಲೀಗಲ್ ಕಂ ಪ್ರೊಬೇಷನ್ ಆಫೀಸರ್ ಶಿವಲೀಲಾ ವನ್ನೂರು ಅವರು ಮಾತನಾಡಿ, ಜಿಲ್ಲೆಯಲ್ಲಿ ಮಕ್ಕಳ ಮೇಲಿನ ಲೈಂಗಿಕ ಅಪರಾಧಗಳನ್ನು ತಡೆಗಟ್ಟಲು ಸರಕಾರವು ವಿವಿಧ ಕಾನೂನು ಗಳನ್ನು ಜಾರಿಯಲ್ಲಿ ತಂದಿರುತ್ತದೆ. ಅವು ಗಳಲ್ಲಿ ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ-2012 ತಿದ್ದುಪಡಿ- 2019 ಪ್ರಮುಖವಾದದ್ದು. ಈ ಕಾಯ್ದೆಯ ನ್ವಯ 18 ವರ್ಷದೊಳಗಿನ ಮಕ್ಕಳ ಮೇಲಿನ ಬೇಧಕ ಲೈಂಗಿಕ ಹಲ್ಲೆಗೆ ಕನಿಷ್ಠ 20 ವರ್ಷಗಳಿಂದ ಅಜೀವ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸಬಹುದಾಗಿದೆ. ಲೈಂಗಿಕ ಕಿರುಕುಳ ಅಂದರೆ, ಮಕ್ಕಳಿಗೆ ಶಾಬ್ದಿಕ, ಅಂಗಿಕ, ಭಾಷಿಕ ಹಾಗೂ ಲಿಖಿತವಾಗಿ ಅವರ ಘನತೆಗೆ ಧಕ್ಕೆ ಉಂಟುಮಾಡಬಹುದಾದ ಯಾವುದೇ ಈ ರೀತಿಯ ಕೃತ್ಯಗಳಿಗೆ 7 ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸಬಹುದಾಗಿದೆ. ಈ ರೀತಿಯ ಕೃತ್ಯಗಳಿಗೆ ಸಹಾಯ, ಪ್ರೋತ್ಸಾಹ ಮತ್ತು ಪ್ರಯತ್ನಪಟ್ಟವರಿಗೂ ಅಷ್ಟೇ ಪ್ರಮಾಣದ ಶಿಕ್ಷೆಯನ್ನು ವಿಧಿಸಬಹು ದಾಗಿದೆ. ಆದ್ದರಿಂದ ಗ್ರಾಮ ಮಟ್ಟದಲ್ಲಿ ವಿವಿಧ ರೀತಿಯಲ್ಲಿ ಜಾಗೃತಿಯನ್ನು ಮೂಡಿಸಲು ಗ್ರಾಮ ಮಟ್ಟದ ಮಕ್ಕಳ ರಕ್ಷಣಾ ಸಮಿತಿಯಲ್ಲಿ ಚರ್ಚಿಸಿ, ಮಕ್ಕಳ ಹಕ್ಕುಗಳು, ಕಾನೂನುಗಳ ಮತ್ತು ಮಕ್ಕಳ ಸುರಕ್ಷತೆ ಕುರಿತು ಸಮುದಾಯಗಳಲ್ಲಿ ಜಾಗೃತಿಯನ್ನು ಮೂಡಿಸಿ, ತನ್ಮೂಲಕ ಮಕ್ಕಳ ಮೇಲಿನ ಲೈಂಗಿಕ ಹಲ್ಲೆ, ಬಾಲ್ಯ ವಿವಾಹಗಳನ್ನು ತಡೆದು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಸಹಕರಿಸುವಂತೆ ತಿಳಿಸಿದರು.

ಹಿಟ್ನಾಳ ಪ್ರಾಥಮಿಕ ಕೇಂದ್ರದ ಆಡಳಿತ ವೈದ್ಯಧಿಕಾರಿ ಡಾ. ಮಂಜುಳಾ ಶರ್ಮ ಅವರು ಮಾತನಾಡಿ, ಮಕ್ಕಳ ಮೇಲಿನ ಲೈಂಗಿಂಕ ದೌರ್ಜನ್ಯ ತಡೆ ಕಾಯ್ದೆ- 2012ನ್ನು ಸರ್ಕಾರವು ಜಾರಿಗೆಗೊಳಿಸಿದ್ದು, ಈ ಕಾಯ್ದೆಯ ಮುಖ್ಯ ಉದ್ದೇಶವೆಂದರೆ ಮಕ್ಕಳ ಮೇಲೆನ ದೌರ್ಜನ್ಯವನ್ನು ತಡೆಗಟ್ಟುವುದಾಗಿದೆ. ಈ ಕಾಯ್ದೆಯ ಡಿಯಲ್ಲಿ 18 ವರ್ಷದೊಳಗಿನ ಹೆಣ್ಣು ಅಥವಾ ಗಂಡು ಮಕ್ಕಳಿಗೆ ಸಂಜ್ಞೆ, ಶಾಬ್ದಿಕವಾಗಿ ಕಿರುಕುಳನ್ನು ನೀಡುವುದು ಸಹ ದೌರ್ಜನ್ಯವೆಂದು ಪರಿಗಣಿಸಲಾಗುತ್ತದೆ. ಈ ಕಾಯ್ದೆಯಡಿಯಲ್ಲಿ ಪ್ರಕರಣವು ದಾಖಲಾದಲ್ಲಿ ಅದು ವಿಚಾರಣಾ ಅರ್ಹ ಮತ್ತು ಜಾಮೀನುರಹಿತ ಪ್ರಕರಣ ಎಂದು ಪರಿಗಣಿಸಲಾಗುತ್ತದೆ. ಆದ್ದರಿಂದ ಎಲ್ಲರೂ ಮಕ್ಕಳ ಹಕ್ಕುಗಳನ್ನು ಗೌರವಿಸಿ ಎಂದರು.

ರಕ್ಷಣಾಧಿಕಾರಿ ರವಿ ಬಡಿಗೇರ ಅವರು ಮಾತನಾಡಿ, ನವಜಾತ ಶಿಶು ಮತ್ತು ಮಕ್ಕಳನ್ನು ಎಲ್ಲೆಂದರಲ್ಲಿ ಬಿಸಾಕಿ ಹೋಗು ವುದು ಕಂಡುಬರುತ್ತಿದೆ. ಮಕ್ಕಳ ಮಾರಟ ಮಾಡುವುದು ಕಾನೂನು ಬಾಹಿರ ಅಪರಾ ವಾಗಿರುತ್ತದೆ. ಯಾರಿಗಾದರು ಮಕ್ಕಳು ಬೇಡವಾದಲ್ಲಿ ಸರಕಾರಕ್ಕೆ ನೀಡಬಹುದು. ಅತಹ ಮಕ್ಕಳ ಆರೈಕೆ ಮತ್ತು ಪೋಷಣೆ ಮಾಡಲಾಗುತದೆ. ಮಕ್ಕಳನ್ನು ಬಿಸಾಕಿ ಹೊದರೆ ಕಾನೂನು ಕ್ರಮಕೈಗೊಳಲಾಗು ವುದು ಎಂದು ಹೇಳಿ, ದತ್ತು ಕಾರ್ಯಕ್ರಮ ಯೋಜನೆಗಳ ಕುರಿತು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಹಿಟ್ನಾಳ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಕೃಷ್ಣಮೂರ್ತಿ ಅವರು ಪ್ರಾಸ್ತಾ ವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿಕಾರ್ಮಿಕ ಇಲಾಖೆ ಸಿಬ್ಬಂದಿ ಸುರೇಶ ಯೋಗಿ, ಹಿಟ್ನಾಳ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶು ಪಾಲರಾದ ಬಸವರಾಜ, ಅಂಗನವಾಡಿ ಮೇಲ್ವಿಚಾರಕಿ ಸುಮಂಗಲಾ ಸಜ್ಜನ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ರಮೇಶ ಹರಿಜನ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ಮುಸಲಾಪೂರದಲ್ಲಿ ರಾಷ್ಟ್ರೀಯ ಹಾವು ಕಡಿತ ನಿಯಂತ್ರಣ ಜಾಗೃತಿ ಕಾರ್ಯಕ್ರಮ



ಕೊಪ್ಪಳ ಮೇ 25-

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಘಟಕ, ಕೊಪ್ಪಳ, ಪ್ರಾಥಮಿಕ ಆರೋಗ್ಯ ಕೇಂದ್ರ ಮುಸಲಾಪೂರ ಇವರ ಸಂಯುಕ್ತಾಶ್ರಯದಲ್ಲಿ ಮೇ 22 ರಂದು ಮುಸಲಾಪೂರ ಗ್ರಾಮದಲ್ಲಿ ರಾಷ್ಟ್ರೀಯ ಹಾವು ಕಡಿತ ನಿಯಂತ್ರಣ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಉಪ ಜಿಲ್ಲಾ ಆರೋಗ್ಯ ಶಿಕ್ಷಣಾ ಧಿಕಾರಿಗಳಾದ ದೇವಮ್ಮ ಅವರು ಮಾತನಾಡಿ, ಹಾವು ಕಡಿತದಿಂದ ಉಂಟಾಗುವ ಮರಣವನ್ನು ನಿಯಂತ್ರಿಸುವ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಭಾರತ ಹಳ್ಳಿಗಳ ದೇಶ ಶೇ. 70ಕ್ಕಿಂ ತಲೂ ಹೆಚ್ಚು ಜನರು ಕೃಷಿಯಲ್ಲಿ ಅವಲಂಬಿತರಾಗಿದ್ದಾರೆ.

ಭಾರತದಲ್ಲಿ ಪ್ರಮುಖ 4 ವಿಷಕಾರಿ ಹಾವುಗಳಾದ ನಾಗರಹಾವು, ಕಟ್ಟಾವು, ಕೊಳಕುಮಂಡಲ ಹಾವು ಹಾಗೂ ಗರಗಸ ಮಂಡಲ ಹಾವು ಕಡಿತದಿಂದ ಉಂಟಾಗುವ ಸಾವುಗಳಲ್ಲಿ 90% ಅಧಿಕ ಸಾವುಗಳಿಗೆ ಕಾರಣವಾಗುತ್ತವೆ. ಹಾಗಾಗಿ ಈ 4 ಹಾವುಗಳ ಬಗ್ಗೆ ಎಚ್ಚರಿಗೆ ವಹಿಸಬೇಕು ಎಂದರು.

ನಾಗರಹಾವು ಬಿಟ್ಟು ಉಳಿತ 3 ವಿಷಕಾರಿ ಹಾವುಗಳು ರಾತ್ರಿವೇಳೆ ಹೆಚ್ಚು ಚಟುವಟಿಕೆಯಿಂದಿರುತ್ತವೆ. ಹಾಗಾಗಿ ರಾತ್ರಿವೇಳೆ ಹೊರಗಡೆ ಹೋಗುವಾಗ ಟಾರ್ಚ್ ಬಳಸಬೇಕು. ಮನೆ ಅಂಗಳವನ್ನು ಇಲಿ ಹೆಗ್ಗನಗಳಂತಹ ಹಾವುಗಳು ತಿನ್ನುವ ಜೀವಿಗಳಿಂದ ಮುಕ್ತವಾಗಿಸುವುದು. ಮನೆಯಂಗಳ ಅಥವಾ ಹೊಲ ಗದ್ದೆ ಗಳಲ್ಲಿ ಸಾಮಾನ್ಯವಾಗಿ ತಿರುಗಾಡುವ ಸ್ಥಳಗಳಲ್ಲಿ ಗಿಡಗಂಟಿಗಳನ್ನು ಕಡಿದು ಸ್ವಚ್ಛವಾಗಿಟ್ಟುಕೊಳ್ಳಬೇಕು. ಹಾವುಗಳಿರುವ ಸಾಧ್ಯತೆ ಹೆಚ್ಚಿರುವ ಸ್ಥಳಗಳಲ್ಲಿ ಕೆಲಸ ಮಾಡುವಾಗ ಶೂಗಳನ್ನು ಬಳಕೆ ಮಾಡಬೇಕು. ರಾತ್ರಿ ಮನೆಯ ಹೊರಗೆ ಹಾಗೂ ಹೊಲಗದ್ದೆಗಳಲ್ಲಿ ಮಲಗಬೇಕಾದಾಗ ನೆಲದಲ್ಲಿ ಮಲಗದೆ ಎತ್ತರ ಪ್ರದೇ ಶದ ಮಂಚ ಬಳಸುವುದು, ನೆಲದಲ್ಲಿ ಮಲಗಲೇ ಬೇಕೆಂದರೆ ಕಡ್ಡಾಯ ವಾಗಿ ಸೊಳ್ಳೆಪರದೆ ಬಳಸುವುದು ಹಾಗೂ ರೈತರು ಹೊಲದಲ್ಲಿ ದನ-ಕರಗಳಿಗೆ ಮೇವು ಹಾಗೂ ಹಸಿಹುಲ್ಲು ಕಿಳುವಾಗ ಕುಡುಗೋಲು ಬಳಸಬೇಕು. ಒಂದು ವೇಳೆ ಹಾವು ಕಚ್ಚಿದರೆ ತಕ್ಷಣ ಸಮೀಪದ ಸರ್ಕಾರಿ ಆಸ್ಪತ್ರೆಗೆ 40 ನಿಮಿಷದೊಳಗಾಗಿ ಹೋಗಿ ಚಿಕಿತ್ಸೆ ಪಡೆದುಕೊಳ್ಳಬೇಕು. ಹಾವು ಕಡೆದ ವ್ಯಕ್ತಿಯನ್ನು ಸಮಾದಾನ ಪಡಿಸಿ, ಗಾಬರಿ ಪಡಿಸಬೇಡಿ. ಹಾವಿನಿಂದ ನಿಧಾನವಾಗಿ ದೂರ ಸರಿಯಿರಿ. ರಕ್ತಬಂಧ ಕಪಟ್ಟಿ ಕಟ್ಟಬೇಡಿ. ಹಾವು ಕಡಿತಕ್ಕೊಳಗಾದ ವ್ಯಕ್ತಿಯನ್ನು ಎಡಭಾಗಕ್ಕೆ ಮಲಗಿಸಿ ಕಚ್ಚಿದ ಭಾಗವನ್ನು ಅಲುಗಾಡದಂತೆ ನೋಡಿಕೊಳ್ಳಿ. ಗಾಯವನ್ನು ಕತ್ತರಿಸಬೇಡಿ, ಏನನ್ನು ಹಚ್ಚಬೇಡಿ. ಹಾವು ಕಚ್ಚಿದ ವ್ಯಕ್ತಿಗೆ ಆಸ್ಪತ್ರೆಯಲ್ಲಿಯೇ ಚಿಕಿತ್ಸೆ ಕೊಡಿಸಿ. ನಾಟಿ ಔಷಧ ಅಥವಾ ಅಸುರಕ್ಷಿತ ಚಿಕಿತ್ಸಾ ಪದ್ದತಿಯನ್ನು ಅವಲಂಬಿಸಬೇಡಿ. ಒಟ್ಟಾರೆಯಾಗಿ ಪ್ರತಿಯೊಬ್ಬರೂ ತಮ್ಮ ತಮ್ಮ ಮನೆಯ ಸುತ್ತ- ಮುತ್ತಲಿನ ಪ್ರದೇಶ ಸ್ವಚ್ಛತೆಯಿಂದ ಇಟ್ಟುಕೊಂಡು ಇದರ ಬಗ್ಗೆ ಇತರರಿಗೂ ಮಾಹಿತಿ ನೀಡಿ, ಜಾಗೃತರಾಗಬೇಕೆಂದು ತಿಳಿಸಿದರು.

ಮುಸಲಾಪೂರ ಪ್ರಾಥಮಿಕ ಆರೋಗ್ಯ ಕೇಂದದ್ರ ವೈದ್ಯಾಧಿಕಾರಿಗಳಾದ ಡಾ. ಅಂಜುಮತಾಜ್ ಅವರು ಮಾತನಾಡಿ, ರೇಬೀಸ್ ವೈರಸ್ ಸೋಂಕಿತ ಪ್ರಾಣಿಗಳು ಮನುಷ್ಯರಿಗೆ ಕಚ್ಚುವುದರಿಂದ ಹರಡುತ್ತದೆ. ಹೆಚ್ಚು ಪ್ರಮಾಣದಲ್ಲಿ ಬೀದಿನಾಯಿಗಳ ಕಡಿತದಿಂದ ಸಂಬಂಧಿಸುತ್ತದೆ. ಒಂದುವೇಳೆ ನಾಯಿ ಕಚ್ಚಿದರೆ, ಕಚ್ಚಿದ ಜಾಗವನ್ನು ಸೋಪು ಮತ್ತು ಶುದ್ಧ ಹರಿಯುವ ನಲ್ಲಿ(ನಳ) ನೀರಿನಲ್ಲಿ 15 ನಿಮೀಷ ತೊಳೆಯಬೇಕು. ಕಚ್ಚಿದ ಜಾಗಕ್ಕೆ ಸ್ಥಳೀಯವಾಗಿ ಲಭ್ಯವಿರುವ ನಂಜು ನಿರೋಧಕ ಔಷಧಿ ಲಭ್ಯವಿದ್ದರೆ ಹಚ್ಚಿರಿ. ಕಚ್ಚಿದ ಜಾಗವನ್ನು ಬ್ಯಾಂಡೇಜ್ ಅಥವಾ ಯಾವುದೇ ರೀತಿಯ ಬಟ್ಟೆಯಿಂದ ಮುಚ್ಚಬೇಡಿ. ಕಚ್ಚಿದ ಜಾಗಕ್ಕೆ ಕೇಸರು ಅಥವಾ ಹಸುವಿನ ಸಗಣೆ, ಕಾಫಿಪುಡಿ, ಮೆಣಸಿನಪುಡಿ, ಸುಣ್ಣ ಅಥವಾ ಇತರೆ ಯವುದೇ ಕಿರಿ-ಕಿರಿ ಉಂಟುಮಾಡುವ ಪದಾರ್ಥ ಹಚ್ಚಬೇಡಿ. ಎಲ್ಲಾ ನಾಯಿಗಳಿಗೆ ಪಶು ಸಂಗೋಪನಾ ಇಲಾಖೆಯಿಂದ ನೀಡುವ ಚುಚ್ಚುಮದ್ದನ್ನು ತಪ್ಪದೇ ಹಾಕಿಸಬೇಕು.

ನಾಯಿ ಅಥವಾ ಯಾವುದೇ ಪ್ರಾಣಿ ಕಡಿತವಾದಲ್ಲಿ ತಕ್ಷಣ ನಿಮ್ಮ ಹತ್ತಿರದ ಸಮು ದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಸಾರ್ವಜನಿಕ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆ ಅಥವಾ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಕ್ಕೆ ಭೇಟಿ ನೀಡಬೇಕು. ನಾಯಿ ಕಡಿತದ ಬಗ್ಗೆ ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ಮಾಡಬಾರದು ಹಾಗೂ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ರೇಬೀಸ್ ತಡೆಗಟ್ಟುವ ಲಸಿಕೆ(ಎ.ಆರ್.ವಿ) ಮತ್ತು ರೇಬಿಸ್ ಇಮ್ಯುನೊ ಗ್ಲೋಬ್ಯುಲಿ ನ್(ಆರ್.ಐ.ಜಿ) ಚಿಕಿತ್ಸೆ ಉಚಿತವಾಗಿರುತ್ತದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಪ್ರಥಮ ದರ್ಜೆ ಸಹಾಯಕರಾದ ವೀರುಪಾಕ್ಷಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶಿವಕುಮಾರ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಯಾಸ್ಮಿನ್, ಆಶಾ ಕಾರ್ಯಕರ್ತೆಯರು, ಗ್ರಾಮದ ನಾಗರಿಕರು, ಗರ್ಭಿಣಿ ಬಾಣಂತಿಯರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದಲ್ಲಿ ಮುಂಗಾರು ಬೀಜ ದಿನೋತ್ಸವ ಕಾರ್ಯಕ್ರಮ



ಕೊಪ್ಪಳ ಮೇ 25-

ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದಲ್ಲಿ ಮುಂಗಾರು ಬೀಜ ದಿನೋತ್ಸವ ಕಾರ್ಯಕ್ರಮ ಸೋಮವಾರ ನಡೆಯಿತು.

ಪ್ರತಿ ವರ್ಷದಂತೆ ಈ ವರ್ಷವೂ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ರಾಯಚೂರಿನಿಂದ ಮೇ 25 ರಂದು ಮುಂಗಾರು ಬೀಜ ದಿನೋ ತ್ಸವವನ್ನು ಆಚರಿಸಲಾಗುತ್ತಿದೆ. ಅದರಂತೆ ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದಲ್ಲಿಯೂ ಮುಂಗಾ ರು ಬೀಜ ದಿನೋತ್ಸವವನ್ನು ಆಚರಿಸಲಾಯಿತು. ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತಾರಣ ನಿರ್ದೇಶಕರಾದ ಡಾ. ಎ.ಆರ್. ಕುರುಬರ ಮತ್ತು ವ್ಯವಸ್ಥಾಪನಾ ಮಂಡಳಿ ಸದಸ್ಯರಾದ ತಿಮ್ಮಣ್ಣ ಚವಡಿ ಹಾಗೂ ಕೊಪ್ಪಳ ಕೃಷಿವಿಸ್ತರಣಾ ಶಿಕ್ಷಣ ಕೇಂದ್ರದ ವಿಸ್ತರಣಾ ಮುಂದಾಳು ಡಾ. ಬದರಿ ಪ್ರಸಾದ ಪಿ.ಆರ್. ಅವರ ನೇತೃತ್ವ ದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮವನ್ನು ವ್ಯವ ಸ್ಥಾಪನಾ ವ್ಯವಸ್ಥಾಪನಾ ಮಂಡಳಿ ಸದಸ್ಯರಾದ ತಿಮ್ಮಣ್ಣ ಚವಡಿ ಅವರು ಉದ್ಘಾಟಿಸಿದರು. ಬಳಿಕ ಅವರು ಮಾತನಾಡಿ, ಈ ಭಾಗದ ರೈತರಿಗೆ ಉತ್ತಮ ಬೀಜಗಳನ್ನು ಒದಗಿಸುವ ಸಲುವಾಗಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಜ್ಞಾನಿಗಳು ಹಾಗೂ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ, ಕೊಪ್ಪಳದ ವಿಜ್ಞಾನಿ ಮತ್ತು ವಿಸ್ತರಣಾ ಮುಂದಾಳು ಗಳೊಂದಿಗೆ ಚರ್ಚಿಸಿ ಉತ್ತಮ ಗುಣಮಟ್ಟದ ವಿವಿಧ ಬೆಳೆಗಳ ಪ್ರಮಾಣಿತ ಸಂಕರಣ ತಳಿಗಳನ್ನು ವಿತರಿಸುವ ಕಾರ್ಯಕ್ರಮವನ್ನು ಇಂದು ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕರೆ ನೀಡಿದರು. ಕೊಪ್ಪಳ ಕೃಷಿವಿಸ್ತರಣಾ ಶಿಕ್ಷಣ ಕೇಂದ್ರದ ವಿಸ್ತರಣಾ ಮುಂದಾಳು ಡಾ. ಬದರಿ ಪ್ರಸಾದ ಪಿ.ಆರ್. ಅವರು ಮಾತನಾಡಿ, ಈ ಭಾಗದ ರೈತರಿಗೆ ಉತ್ತಮ ತಳಿ ಮತ್ತು ಸಂಕರಣ ತಳಿಗಳನ್ನು ಒದಗಿಸುವ ಉದ್ದೇಶದಿಂದ ಈ ಕಾರ್ಯ ಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ರೈತರು ತಳಿಗಳನ್ನು ಆಯ್ಕೆ ಮಾಡಿ ವೈಜ್ಞಾನಿಕವಾಗಿ ಬಿತ್ತನೆ ಮಾಡಿ ನಿರ್ವಹಣೆ ಮಾಡಿದದಲ್ಲಿ ಉತ್ತಮ ಫಸಲು ಪಡೆಯಬಹುದೆಂದು ತಿಳಿಸಿದರು. ಗುಳದಳ್ಳಿ ಕೃಷಿ ಸಂಶೋಧನಾ ಕೇಂದ್ರದ ಕ್ಷೇತ್ರ ಅಧೀಕ್ಷಕರು ಹಾಗೂ ಬೀಜ ವಿಜ್ಞಾನಿಯಾದ ಡಾ. ಹನುಮಂತಪ್ಪ ದಾಸರಹಳ್ಳಿ ಅವರು ಮಾತನಾಡುತ್ತಾ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ರಾಯಚೂರಿನಲ್ಲಿ ಲಭ್ಯವಿರುವ ವಿವಿಧ ಬೆಳೆಗಳ ತಳಿ ಮತ್ತು ಸಂಕರಣ ತಳಿಗಳ ಬಗ್ಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ರೈತರು ಕಡ್ಡಾಯವಾಗಿ ಬೀಜೋಪಚಾರ ಮಾಡಿ ಬಿತ್ತನೆ ಮಾಡಿದಲ್ಲಿ ಉತ್ತಮ ಮೊಳಕೆ ಒಡೆದು ಮಣ್ಣಿನಲ್ಲಿರುವ ರೋಗಾಣುಗಳಿಂದ ಬರುವ ರೋಗ ನಿರೋಧಕ ಶಕ್ತಿಯನ್ನು ಮತ್ತು ಬರನಿರೋಧಕ ಶಕ್ತಿಯನ್ನು ಪಡೆ ಯುವುದಲ್ಲದೆ ಇಳುವರಿಯಲ್ಲಿ ಶೇಕಡಾ 15 ರಿಂದ 25 ರಷ್ಟು ಹೆಚ್ಚಾಗುತ್ತದೆ ಎಂದು ಮಾಹಿತಿ ನೀಡಿದರು.

# ನಿಮ್ಮೂರು ಸುದ್ದಿ

## ಸಂಪಾದಕೀಯ

## ಖಾಸಗಿ ಶಿಕ್ಷಣ ಸಂಸ್ಥೆಗಳ ಶುಲ್ಕ ಏರುತ್ತಲೇ ಇದೆ, ಸರ್ಕಾರವೇಕೆ ಸುಮ್ಮನಿದೆ?




ಬಡ ಪೋಷಕರ ನೋವು ಕೇವಲ ಕುಟುಂಬಗಳ ಸಮಸ್ಯೆಯಲ್ಲ, ಅದು ಭವಿಷ್ಯದ ಪ್ರಜೆಗಳ ಪ್ರಶ್ನೆ. ಶಿಕ್ಷಣದ ಬಾಗಿಲು ಹಣವಂತರಿಗೆ ಮಾತ್ರ ತೆರೆಯುವ ಸ್ಥಿತಿ ಬಂದರೆ, ಸಮಾಜದಲ್ಲಿ ಅಸಮಾನತೆ ಹೆಚ್ಚುತ್ತದೆ. ಸಾಮರಸ್ಯ-ಸಹಬಾಳ್ವೆಯ ಬದುಕಿಗೆ ಭಂಗ ಬರುತ್ತದೆ. ಆದ್ದರಿಂದ ಶಿಕ್ಷಣವನ್ನು ವ್ಯಾಪಾರದ ಮಾರುಕಟ್ಟೆಯಿಂದ ಹೊರತೆಗೆದು, ಸಾರ್ವಜನಿಕ ಹಕ್ಕಿನ ರೂಪದಲ್ಲಿ ಉಳಿಸುವ ಜವಾಬ್ದಾರಿ ಸರ್ಕಾರದ ಮೇಲಿದೆ.

ಬೇಸಿಗೆ ರಜೆ ಕಳೆದು ಶಾಲೆಗಳು ಶುರುವಾಗುತ್ತಿವೆ. ದೀರ್ಘರಜೆಯ ಮಂಪರಿನಿಂದ ಎದ್ದ ಮಕ್ಕಳು ಶಾಲೆಯತ್ತ ಹೆಜ್ಜೆ ಹಾಕುತ್ತಿದ್ದಾರೆ. ಶಾಲೆ ಎಂದಾಕ್ಷಣ ಸಹಜವಾಗಿಯೇ, ಪ್ರವೇಶ ಶುಲ್ಕ, ವಾರ್ಷಿಕ ಶುಲ್ಕ, ಅಭಿವೃದ್ಧಿ ಶುಲ್ಕ, ಸಾರಿಗೆ ಶುಲ್ಕ, ಡಿಜಿಟಲ್ ಕ್ಲಾಸ್ ಶುಲ್ಕ, ಯೂನಿಫಾರ್ಮ್, ಪುಸ್ತಕ ಇತ್ಯಾದಿ ಶುಲ್ಕಗಳ ಪಟ್ಟಿ ನೋಡಿ ಪೋಷಕರು ಪ್ರಜ್ಞೆ ತಪ್ಪುವುದುಂಟು. ಬಲ್ಲಿದರಿಗೆ ಎಲ್ಲವೂ ಸಲೀಸು. ಆದರೆ ಬಡ ಪೋಷಕರ ಪಡಿಪಾಟಲು ಹೇಳತೀರದು.

ಅಂಥದ್ದೇ ಒಂದು ಬಡಕುಟುಂಬ ಶಿವನಂಜಪ್ಪ ಮತ್ತು ಸಾವಿತ್ರಮ್ಮನವರದು. ಮದುವೆಯಾಗುತ್ತಿದ್ದಂತೆ ಉದ್ಯೋಗ ಅರಸಿ ಬೆಂಗಳೂರಿಗೆ ಬಂದರು. ಇಬ್ಬರೂ ಅನಕ್ಷರಸ್ಥರು. ಶಿವನಂಜಪ್ಪನವರು ಹಗಲು-ರಾತ್ರಿ ಆಟೋ ಓಡಿಸಿದರೆ, ಸಾವಿತ್ರಮ್ಮನವರು ಹತ್ತಾರು ಮನೆಗಳ ಕೆಲಸ ಮಾಡುತ್ತ ಸಂಸಾರದ ನೊಗ ಹೊತ್ತು ಸರಿದೂಗಿಸಿದವರು. ಇಬ್ಬರು ಮಕ್ಕಳು. ನಗರವಾಸಿಗಳಾಗಿ ಇವತ್ತಿಗೆ 18 ವರ್ಷಗಳಾಗಿವೆ, ಇವತ್ತಿಗೂ ಬಾಡಿಗೆ ಮನೆಯಲ್ಲಿಯೇ ವಾಸಿಸುತ್ತಿದ್ದಾರೆ. ಹೊಟ್ಟೆ-ಬಟ್ಟೆ ಕಟ್ಟಿ ಬದುಕುತ್ತಿರುವ ಅವರಿಗೆ ಒಂದೇ ಆಸೆ, ನಮ್ಮ ಮಕ್ಕಳು ನಮ್ಮಂತಾಗದಿರಲಿ, ಚೆನ್ನಾಗಿ ಓದಲಿ, ಮುಂದೆ ಬರಲಿ. ಅದಕ್ಕಾಗಿ ಅವರು ತಮ್ಮೆಲ್ಲ ದುಡಿಮೆಯನ್ನು ಮಕ್ಕಳ ವಿದ್ಯಾಭ್ಯಾಸಕ್ಕಾಗಿ ವಿನಿಯೋಗಿಸುತ್ತಿದ್ದಾರೆ. ಸರೀಕರ ಮಕ್ಕಳಂತೆ ತಮ್ಮ ಮಕ್ಕಳು ಇಂಗ್ಲಿಷ್ ಕಲಿಯಲಿ ಎಂದು ಕಾನ್ವೆಂಟಿಗೆ ಸೇರಿಸಿದ್ದಾರೆ.

ಕಾನ್ವೆಂಟ್ ನಲ್ಲಿ ಓದಿದ, ಎಂಜಿನಿಯರಿಂಗ್ ಆಸೆ ಹೊತ್ತ ಮಗ ಈಗ ಪಿಯುಸಿಗೆ ಸೇರಬೇಕು. ಸರ್ಕಾರಿ ಕಾಲೇಜುಗಳಿಗೆ ಸೇರಿದರೆ ಭವಿಷ್ಯವಿಲ್ಲ, ಅಲ್ಲಿಗೆ ಕಳಿಸಲು ಪೋಷಕರಿಗೂ ಮನಸ್ಸಿಲ್ಲ. ಆದರೆ ಖಾಸಗಿ ಕಾಲೇಜುಗಳ ದುಬಾರಿ ಶುಲ್ಕ ಭರಿಸಲು ಪೋಷಕರಿಗೆ ಸಾಧ್ಯವಾಗುತ್ತಿಲ್ಲ. ಅವರ ತೊಳಲಾಟ, ತಳಮಳ ಹೇಳಿಕೊಳ್ಳುವಂಥದ್ದಲ್ಲ; ಹೇಳಿದರೆ ಯಾರಿಗೂ ಅರ್ಥವಾಗುವುದಿಲ್ಲ.

ಒಂದು ಕಾಲದಲ್ಲಿ ಶಾಲೆ ಎಂದರೆ ಜ್ಞಾನದೇಗುಲ ಎನ್ನುತ್ತಿದ್ದರು. ಇಂದು ಅದೇ ಶಾಲಾ-ಕಾಲೇಜುಗಳು ದುಡ್ಡಿದ್ದವರ ಪಾಲಿಗೆ ಪದವಿ ಕರುಣಿಸುವ ಕಾಮಧೇನುವಾಗಿವೆ. ಲಕ್ಷಾಂತರ ರೂಪಾಯಿ ಶುಲ್ಕ ವಸೂಲಿ ಮಾಡುವ ಖಾಸಗಿ ಶಿಕ್ಷಣ ಸಂಸ್ಥೆಗಳು ಈಗ ಕಾರ್ಪೊರೇಟ್ ಸಂಸ್ಥೆಗಳಾಗಿ ಬದಲಾಗುತ್ತಿವೆ. ಶಿಕ್ಷಣ ಇಂದು ಬಡಕುಟುಂಬಗಳಿಗೆ ಭಾರವಾಗುತ್ತಿದೆ. ಮಕ್ಕಳ ಭವಿಷ್ಯ ಭದ್ರಗೊಳಿಸಬೇಕೆಂಬ ಕನಸಿನೊಂದಿಗೆ ಬದುಕುತ್ತಿರುವ ಬಡ ಪೋಷಕರು ಈಗ ಸಂಬಳದ ಹಣವನ್ನು ಶಾಲಾ-ಕಾಲೇಜಿನ ಶುಲ್ಕಕ್ಕೆ ಮೀಸಲಿಟ್ಟರೂ ಸಾಲದಾಗಿದೆ. ಬ್ಯಾಂಕ್ ಸಾಲ, ಗೋಲ್ಡ್ ಗಿರವಿ ಇಡುವುದು ಸಾಮಾನ್ಯವಾಗಿದೆ.

ಶಾಲಾ-ಕಾಲೇಜುಗಳ ಶುಲ್ಕ ವರ್ಷದಿಂದ ವರ್ಷಕ್ಕೆ ಏರಿಕೆಯಾಗುತ್ತಲೇ ಇದೆ. ಅನೇಕ ಖಾಸಗಿ ಶಿಕ್ಷಣ ಸಂಸ್ಥೆಗಳು ಗುಣಮಟ್ಟದ ಶಿಕ್ಷಣ ಎಂಬ ನೆಪದಡಿ ಪೋಷಕರನ್ನು ಅಕ್ಷರಶಃ ಸುಲಿಗೆ ಮಾಡುತ್ತಿವೆ. ಈ ಸುಲಿಗೆಯ ಸುಳಿಗೆ ಸಿಲುಕುತ್ತಿರುವವರು ಬಡ ಮತ್ತು ಮಧ್ಯಮ ವರ್ಗದ ಪೋಷಕರು. ಬೆಲೆ ಏರಿಕೆಯ ದುರ್ಭರ ದಿನಗಳಲ್ಲಿ ಬದುಕುವುದೇ ಕಷ್ಟವಾಗಿದೆ. ಕೆಲವರು ಎರಡೆರಡು ಉದ್ಯೋಗ ನಿರ್ವಹಿಸಿದರೂ ಸಾಲದಾಗಿದೆ. ಮಕ್ಕಳ ಶಿಕ್ಷಣಕ್ಕಾಗಿ ಜೀವ ಒತ್ತೆ ಇಡಬೇಕಾದ, ಹೋರಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಹಾಗಾದರೆ ಸರ್ಕಾರದ ಪಾತ್ರವೇನು, ದುಬಾರಿ ಶುಲ್ಕ ನಿಯಂತ್ರಣವಿಲ್ಲವೇಕೆ ಎಂಬ ಪ್ರಶ್ನೆಗಳು ಎದುರಾಗುವುದು ಸಹಜ. ಶಿಕ್ಷಣ ಮೂಲಭೂತ ಹಕ್ಕು ಎಂದು ಸಂವಿಧಾನ ಹೇಳುತ್ತದೆ. ಆದರೆ ಸರ್ಕಾರಗಳು ಕ್ರಮೇಣ ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ದುರ್ಬಲಗೊಳಿಸುತ್ತ ಸಾಗಿವೆ. ಇದೇ ಇಂದಿನ ಸಮಸ್ಯೆಯ ಮೂಲ ಕಾರಣವಾಗಿದೆ. ಸರ್ಕಾರಿ ಶಾಲಾ-ಕಾಲೇಜುಗಳಿಗೆ ಸಮರ್ಪಕ ಅನುದಾನ, ಮೂಲಸೌಕರ್ಯ, ಶಿಕ್ಷಕರ ನೇಮಕ, ಗುಣಮಟ್ಟದ ಪಾಠ ವ್ಯವಸ್ಥೆ ಒದಗಿಸಲು ವಿಫಲವಾದಾಗ ಜನ ಖಾಸಗಿ ಶಿಕ್ಷಣ ಸಂಸ್ಥೆಗಳತ್ತ ಮುಖ ಮಾಡುತ್ತಾರೆ. ಅದನ್ನು ಖಾಸಗಿ ಶಿಕ್ಷಣ ಸಂಸ್ಥೆಗಳು ದುರುಪಯೋಗಪಡಿಸಿಕೊಳ್ಳುತ್ತಿವೆ.

ದುರದೃಷ್ಟಕರ ಸಂಗತಿ ಎಂದರೆ, ಇಂದು ರಾಜ್ಯದಲ್ಲಿರುವ ಬಹುತೇಕ ಖಾಸಗಿ ಶಿಕ್ಷಣ ಸಂಸ್ಥೆಗಳ ಮಾಲೀಕರು ಹೆಚ್ಚೂಕಡಿಮೆ ರಾಜಕಾರಣಿಗಳೇ ಆಗಿದ್ದಾರೆ. ಇಲ್ಲವೇ ಅವರ ಸಂಬಂಧಿಕರಾಗಿದ್ದಾರೆ. ಇಲ್ಲದಿದ್ದರೆ ಸಹಭಾಗಿತ್ವ ಹೊಂದಿದ್ದಾರೆ. ಅವರನ್ನು ಬಿಟ್ಟರೆ ಜಾತಿಯ ಮಠಗಳು, ಸ್ವಾಮೀಜಿಗಳು, ಮುಲ್ಲಾಗಳು, ಮಿಷನರಿಗಳು ಮಾಲೀಕತ್ವ ಹೊಂದಿವೆ. ಇವರು ಮತ್ತು ರಾಜಕಾರಣಿಗಳ ನಡುವೆ ಕೊಡು-ಕೊಳ್ಳುವ ವ್ಯವಹಾರವಿದೆ. ರಾಜಕಾರಣ ಮತ್ತು ಹಣಕ್ಕಾಗಿ ಶಿಕ್ಷಣ ಬಲಿಯಾಗುತ್ತಿದೆ.

ಇದರ ನಡುವೆಯೇ ಶಿಕ್ಷಣ ಮೂಲಭೂತ ಹಕ್ಕು ಎಂದು ಹೇಳುವ ಸರ್ಕಾರ, ಶಿಕ್ಷಣ ಕ್ಷೇತ್ರಕ್ಕಾಗಿ ವರ್ಷಕ್ಕೆ ಸಾವಿರಾರು ಕೋಟಿ ರೂಪಾಯಿಗಳನ್ನು ವ್ಯಯಿಸುತ್ತಿದೆ. 2023-24ರ ಬಜೆಟ್‌ನಲ್ಲಿ ಶಿಕ್ಷಣ, ಕ್ರೀಡೆ, ಕಲೆ ಮತ್ತು ಸಂಸ್ಕೃತಿ ವಿಭಾಗಕ್ಕೆ ಸುಮಾರು 33,271 ಕೋಟಿ; 2024-25ರ ಬಜೆಟ್‌ನಲ್ಲಿ 40,945 ಕೋಟಿ ಅನುದಾನ ಘೋಷಿಸಲಾಗಿದೆ. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಕಾರ್ಯಕ್ರಮಗಳಿಗೆ 22,209 ಕೋಟಿ ಮೀಸಲಿಡಲಾಗಿದೆ. ಮಧ್ಯಾಹ್ನ ಬಿಸಿಯೂಟ ಯೋಜನೆಗೆ 1,553 ಕೋಟಿ ಅನುದಾನ ನೀಡಲಾಗಿದೆ. 2026ರ ಅವಧಿಯಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಗಳ ವಿಸ್ತರಣೆ, ಶಿಕ್ಷಕರ ನೇಮಕ, ಮೂಲಸೌಕರ್ಯ, ಡಿಜಿಟಲ್ ಶಿಕ್ಷಣ ಮತ್ತು ಪಿಎಂಶ್ರೀ ಶಾಲೆಗಳ ಯೋಜನೆಗಳಿಗೆ ಹೆಚ್ಚುವರಿ ಹೂಡಿಕೆ ಮಾಡುವುದಾಗಿ ಸರ್ಕಾರ ಘೋಷಿಸಿದೆ.

ಶಿಕ್ಷಣ ಕ್ಷೇತ್ರಕ್ಕೇ ಮೂವರು ಮಂತ್ರಿಗಳು, ಅಧಿಕಾರಿವರ್ಗ, ಅನುದಾನ ಸರ್ಕಾರದ ವತಿಯಿಂದ ವಿನಿಯೋಗವಾಗುತ್ತಿದ್ದರೂ, ಸಾರ್ವಜನಿಕ ಶಿಕ್ಷಣ ಕ್ಷೇತ್ರ ಸದೃಢಗೊಳ್ಳಲಿಲ್ಲ. ಬದಲಿಗೆ ಖಾಸಗಿಯವರ ಹಿಡಿತ ಗಟ್ಟಿಗೊಳ್ಳತೊಡಗಿದೆ. ಖಾಸಗಿಯವರನ್ನು ನಿಯಂತ್ರಿಸುವ ಕಾಯ್ದೆ ಕಾನೂನು ರೂಪಿಸುವಲ್ಲಿ ಮತ್ತು ಅವುಗಳನ್ನು ಅನುಷ್ಠಾನಕ್ಕೆ ತರುವಲ್ಲಿ ಸರ್ಕಾರ ವಿಫಲವಾಗುತ್ತಿದೆ. ಉದಾಹರಣೆಗೆ ಶುಲ್ಕ ನಿಗದಿ ಮಾಡಲು ಸರ್ಕಾರಗಳ ಬಳಿ ಸಮರ್ಪಕ ಯಂತ್ರಾಂಗ ಇದ್ದರೂ, ಅದರ ಅನುಷ್ಠಾನದಲ್ಲಿ ರಾಜಕೀಯ ಒತ್ತಡ, ಖಾಸಗಿ ಶಿಕ್ಷಣ ಲಾಬಿಗಳ ಪ್ರಭಾವಕ್ಕೆ ಸರ್ಕಾರ ಮಣಿಯುತ್ತಿದೆ. ಅನೇಕ ಖಾಸಗಿ ಸಂಸ್ಥೆಗಳು ಸರ್ಕಾರದ ಮಾರ್ಗಸೂಚಿಗಳನ್ನು ಮೀರಿ ಶುಲ್ಕ ವಸೂಲಿ ಮಾಡಿದರೂ ಕೇಳುವವರಿಲ್ಲದಾಗಿದೆ. ಪೋಷಕರು ಶುಲ್ಕ ಭರಿಸುವಾಗ ಬೇಸತ್ತು ಬೀದಿಗಿಳಿಯುತ್ತಾರೆ, ಪ್ರತಿಭಟಿಸುತ್ತಾರೆ. ಆದರೆ ಸಮಸ್ಯೆಗೆ ಶಾಶ್ವತ ಪರಿಹಾರ ಸಿಗುವುದಿಲ್ಲ.

ಇದು ಕೇವಲ ಆರ್ಥಿಕ ಪ್ರಶ್ನೆಯಲ್ಲ, ಸಾಮಾಜಿಕ ನ್ಯಾಯದ ಪ್ರಶ್ನೆಯೂ ಹೌದು. ಶಿಕ್ಷಣ ದುಬಾರಿಯಾದಂತೆ ಬಡ ಮತ್ತು ಹಿಂದುಳಿದ ವರ್ಗಗಳ ಮಕ್ಕಳು ಗುಣಮಟ್ಟದ ಶಿಕ್ಷಣದಿಂದ ವಂಚಿತರಾಗುವ ಅಪಾಯ ಹೆಚ್ಚುತ್ತದೆ. ಸಮಾಜದಲ್ಲಿ ಶಿಕ್ಷಣವೇ ವರ್ಗ ವಿಭಜನೆಯ ಸಾಧನವಾದರೆ, ಸಮಾನತೆಯ ಕನಸು ಘೋಷಣೆಗಷ್ಟೇ ಸೀಮಿತವಾಗುತ್ತದೆ. ಸಮಾಜವಾದಿ ಮುಖ್ಯಮಂತ್ರಿಗಳಿದ್ದರೂ, ಸಮಾನತೆ ಸಾಕಾರಗೊಳ್ಳುವುದು ಸಾಧ್ಯವಿಲ್ಲವೆನಿಸುತ್ತಿದೆ.

ಈಗಲೂ ಕಾಲ ಮಿಂಚಿಲ್ಲ. ಸರ್ಕಾರ ಕೆಲವು ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು. ತಕ್ಷಣ ಸಭೆ ಕರೆದು ಖಾಸಗಿ ಶಾಲಾ-ಕಾಲೇಜುಗಳ ಶುಲ್ಕಕ್ಕೆ ಗರಿಷ್ಠ ಮಿತಿ ನಿಗದಿ ಮಾಡಬೇಕು. ಇಲ್ಲವೇ ಏಕರೂಪದ ಶುಲ್ಕ ನಿಗದಿಗೆ ಕ್ರಮವಹಿಸಬೇಕು. ಅನಧಿಕೃತ ಶುಲ್ಕ ವಸೂಲಿಗೆ ಕಠಿಣ ಶಿಕ್ಷೆ ವಿಧಿಸಬೇಕು. ಇದಕ್ಕೆ ಪರ್ಯಾಯವಾಗಿ ಸರ್ಕಾರಿ ಶಿಕ್ಷಣ ಸಂಸ್ಥೆಗಳ ಗುಣಮಟ್ಟವನ್ನು ಖಾಸಗಿ ಸಂಸ್ಥೆಗಳಿಗೆ ಸ್ಪರ್ಧೆಯೊಡ್ಡುವ ಮಟ್ಟಕ್ಕೆ ಹೆಚ್ಚಿಸಬೇಕು. ಶಿಕ್ಷಕರ ನೇಮಕಾತಿ, ಡಿಜಿಟಲ್ ಸೌಲಭ್ಯ, ಪ್ರಯೋಗಾಲಯ, ಗ್ರಂಥಾಲಯ ಇನ್ನಿತರ ಅಭಿವೃದ್ಧಿಗೆ ಆದ್ಯತೆ ನೀಡಬೇಕು.

ಬಡ ಪೋಷಕರ ನೋವು ಕೇವಲ ಕುಟುಂಬಗಳ ಸಮಸ್ಯೆಯಲ್ಲ, ಅದು ಭವಿಷ್ಯದ ಪ್ರಜೆಗಳ ಪ್ರಶ್ನೆ. ಶಿಕ್ಷಣದ ಬಾಗಿಲು ಹಣವಂತರಿಗೆ ಮಾತ್ರ ತೆರೆಯುವ ಸ್ಥಿತಿ ಬಂದರೆ, ಸಮಾಜದಲ್ಲಿ ಅಸಮಾನತೆ ಹೆಚ್ಚುತ್ತದೆ. ಸಾಮರಸ್ಯ-ಸಹಬಾಳ್ವೆಯ ಬದುಕಿಗೆ ಭಂಗ ಬರುತ್ತದೆ. ಆದ್ದರಿಂದ ಶಿಕ್ಷಣವನ್ನು ವ್ಯಾಪಾರದ ಮಾರುಕಟ್ಟೆಯಿಂದ ಹೊರತೆಗೆದು, ಸಾರ್ವಜನಿಕ ಹಕ್ಕಿನ ರೂಪದಲ್ಲಿ ಉಳಿಸುವ ಜವಾಬ್ದಾರಿ ಸರ್ಕಾರದ ಮೇಲಿದೆ.

# ದೀದಿ ಧೈರ್ಯ ಕರ್ನಾಟಕ ಕಾಂಗ್ರೆಸ್ ಕೂಡ ಪಾಲಿಸಲಿ!




ಕರ್ನಾಟಕದಲ್ಲಿ ಮತದಾರರ ಪಟ್ಟಿಯ ( ) ಪ್ರಕ್ರಿಯೆಯ ಬಗ್ಗೆ ಬಹಳ ಚರ್ಚೆ ನಡೆಯುತ್ತಿದೆ. ಇದು ಸಾಮಾನ್ಯ ಮತದಾರರ ಪಟ್ಟಿ ಸರಿಪಡಿಸುವ ಕೆಲಸವಲ್ಲ, ಬದಲಿಗೆ ಬಿಜೆಪಿಗೆ ವೋಟು ಹಾಕದವರನ್ನು, ವಿಶೇಷವಾಗಿ ಮುಸ್ಲಿಮರನ್ನು ಉದ್ದೇಶಪೂರ್ವಕವಾಗಿ ಹೊರತಳ್ಳುವ ಪಿತೂರಿ.

ಪ್ರಜಾಪ್ರಭುತ್ವದ ಅತಿದೊಡ್ಡ ಹಬ್ಬವೆಂದರೆ ಚುನಾವಣೆ, ಆ ಚುನಾವಣೆಯ ಜೀವಾಳವೇ ಮತದಾರರ ಪಟ್ಟಿ. ಆದರೆ ಇತ್ತೀಚಿನ ದಿನಗಳಲ್ಲಿ ಕರ್ನಾಟಕದಲ್ಲಿ ಕೇಳಿಬರುತ್ತಿರುವ ಮತದಾರರ ಸಮೀಕ್ಷೆ ಮತ್ತು ಮತಗಳ ಪಟ್ಟಿ ಪರಿಷ್ಕರಣೆಯ ಸುದ್ದಿಗಳನ್ನು ನೋಡಿದರೆ, ಇದು ವ್ಯವಸ್ಥಿತವಾಗಿ ಒಂದು ನಿರ್ದಿಷ್ಟ ಸಮುದಾಯವನ್ನು ಪ್ರಜಾಪ್ರಭುತ್ವದ ಪ್ರಕ್ರಿಯೆಯಿಂದ ಹೊರಗಿಡುವ ಪಿತೂರಿಯಂತೆ ಭಾಸವಾಗುತ್ತಿದೆ. ಬಿಜೆಪಿ ತನ್ನ ಮತ ಬ್ಯಾಂಕ್ ವೃದ್ಧಿಸಿಕೊಳ್ಳಲು ಸಾಧ್ಯವಾಗದ ಕಡೆಗಳಲ್ಲಿ, ತನ್ನ ಪ್ರತಿಸ್ಪರ್ಧಿಗಳ ಮತಗಳನ್ನು ಅಳಿಸಿಹಾಕುವ ಶಾರ್ಟ್‌ಕಟ್ ಹಾದಿ ಹಿಡಿದಿದೆ ಎಂಬ ಆರೋಪಗಳು ದಟ್ಟವಾಗಿವೆ.

ಬಿಜೆಪಿಯ ಮತಗಳಿಕೆಯು ಕರ್ನಾಟಕದಲ್ಲಿ ಒಂದು ಹಂತಕ್ಕೆ ಬಂದು ಸ್ಥಗಿತಗೊಂಡಿದೆ ಎಂಬುದು ಅಂಕಿಅಂಶಗಳಿಂದ ಸ್ಪಷ್ಟವಾಗುತ್ತಿದೆ. ಹೊಸ ಮತಗಳನ್ನು ಸೆಳೆಯುವ ಶಕ್ತಿ ಉಡುಗಿ ಹೋದಾಗ, ಇರುವ ವಿರೋಧಿ ಮತಗಳನ್ನು ಚದುರಿಸುವುದು ಅವರ ತಂತ್ರ. ವಿಶೇಷವಾಗಿ ಮುಸ್ಲಿಂ ಸಮುದಾಯ ದಲಿತರು ಹಾಗೂ ಬಡವರು ವಾಸಿಸುವ ಪ್ರದೇಶಗಳಲ್ಲಿ ''ಮನೆಯಲ್ಲಿ ಯಾರೂ ಇಲ್ಲ'', ''ಇವರು ಇಲ್ಲಿಂದ ವಲಸೆ ಹೋಗಿದ್ದಾರೆ'' ಅಥವಾ ''ದಾಖಲೆಗಳು ಸರಿಯಿಲ್ಲ'' ಎಂಬ ಕುಂಟು ನೆಪಗಳನ್ನು ಒಡ್ಡಿ ಸಾವಿರಾರು ಮತಗಳನ್ನು ಪಟ್ಟಿಯಿಂದ ಕೈಬಿಡಲಾಗುತ್ತಿದೆ. ಇದು ಕೇವಲ ಮತದಾನದ ಹಕ್ಕಿನ ಹರಣವಲ್ಲ, ಇದು ಒಂದು ಹಿಂದುಳಿದವರ ಅಸ್ತಿತ್ವವನ್ನೇ ಅಳಿಸುವ ಪ್ರಯತ್ನ.

ಈಗ ನಾವೆಲ್ಲರೂ ಕೇಳಲೇಬೇಕಾದ ಪ್ರಶ್ನೆಯೆಂದರೆ ಕಾಂಗ್ರೆಸ್ ನಾಯಕರು ಏನು ಮಾಡುತ್ತಿದ್ದಾರೆ? ಅಧಿಕಾರಕ್ಕೆ ಬರಲು ಮುಸ್ಲಿಂ, ದಲಿತ ಹಾಗೂ ಬಡವರ ಏಕಮುಖ ಬೆಂಬಲ ಬೇಕು, ಆದರೆ ಆ ಸಮುದಾಯದ ಹಕ್ಕುಗಳ ಮೇಲೆ ದಾಳಿಯಾದಾಗ ಈ ನಾಯಕರು ಎಲ್ಲಿ ಅಡಗಿ ಕುಳಿತುಕೊಳ್ಳುತ್ತಾರೆ?

ಪಶ್ಚಿಮ ಬಂಗಾಳದ ಮಮತಾ ಬ್ಯಾನರ್ಜಿಯವರನ್ನು ಒಮ್ಮೆ ನೋಡಿ. ಕೇಂದ್ರ ಸರ್ಕಾರ ಅಥವಾ ಬಿಜೆಪಿ ಮತದಾರರ ಹಕ್ಕಿಗೆ ಕೈ ಹಾಕಿದರೆ ಅವರು ಬೀದಿಗಿಳಿದು ಸಿಂಹಿಣಿಯಂತೆ ಹೋರಾಡುತ್ತಾರೆ. ಪಶ್ಚಿಮ ಬಂಗಾಳದಲ್ಲಿ ಪ್ರಕ್ರಿಯೆಯಲ್ಲಿ ಸುಮಾರು 91 ಲಕ್ಷ ಮತದಾರರ ಹೆಸರುಗಳು ತೆಗೆದುಹಾಕಲ್ಪಟ್ಟಿವೆ. ಮುಸ್ಲಿಮರು ರಾಜ್ಯದ ಜನಸಂಖ್ಯೆಯಲ್ಲಿ ಸುಮಾರು 27% ಇದ್ದರೂ, ತೆಗೆದುಹಾಕಲ್ಪಟ್ಟವರಲ್ಲಿ 34% ಮುಸ್ಲಿಮರು ಎಂದು ವರದಿಗಳು ಹೇಳುತ್ತವೆ. ಮಮತಾ ಅವರು ಇದನ್ನು ''ಬಿಜೆಪಿ-ಚುನಾವಣಾ ಆಯೋಗದ ಸಂಚು'' ಎಂದು ಕರೆದು, ಧರಣಿ ಕುಳಿತು, ಸುಪ್ರೀಂ ಕೋರ್ಟ್‌ಗೆ ಹೋಗಿ, ಅಧಿಕಾರಿಗಳ ಮೇಲೆ ಒತ್ತಡ ಹೇರಿ ಪ್ರತಿರೋಧ ಒಡ್ಡುತ್ತಿದ್ದಾರೆ. ಅನೇಕ ಹೆಸರುಗಳನ್ನು ಮರುಸೇರಿಸಲು ಒತ್ತಾಯಿಸಿದ್ದಾರೆ. ''ಕೆಲ ಸಮುದಾಯಗಳ ಹೆಸರುಗಳನ್ನ ಉದ್ದೇಶಪೂರ್ವಕ ತೆಗೆಯಲಾಗುತ್ತಿದೆ'' ಎಂದು ಆರೋಪಿಸಿ ಜನರನ್ನು ಎಚ್ಚರಿಸಿದ್ದಾರೆ.

ಆದರೆ ಕರ್ನಾಟಕದಲ್ಲಿ? ಕಾಂಗ್ರೆಸ್ ಸರ್ಕಾರ ಇದ್ದರೂ, ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಸೇರಿದಂತೆ ಉಳಿದ ನಾಯಕರು ಈ ವಿಷಯದಲ್ಲಿ ತೀವ್ರವಾದ ಜನಜಾಗೃತಿ ಅಭಿಯಾನ ನಡೆಸಿಲ್ಲ. ಮಂತ್ರಿಗಳು, ಶಾಸಕರು ಬೂತ್ ಮಟ್ಟದಲ್ಲಿ ಕೆಲಸ ಮಾಡಿ, ಪ್ರತಿ ಮನೆಗೆ ಹೋಗಿ ಮತದಾರರ ಪಟ್ಟಿ ಪರಿಶೀಲಿಸಿ, ಪಟ್ಟಿಯಿಂದ ತೆಗೆದುಹಾಕಲ್ಪಟ್ಟವರಿಗೆ -7 ಅಥವಾ ಇತರ ಮನವಿಗಳ ಮೂಲಕ ಸಹಾಯ ಮಾಡುವಂತಹ ಕ್ರಮಗಳು ಗಣನೀಯವಾಗಿ ಕಾಣುತ್ತಿಲ್ಲ. ಕೆಲವು ಸಿವಿಲ್ ಸೊಸೈಟಿ ಸಂಘಟನೆಗಳು ಮತ್ತು ಜನಪರ ಗುಂಪುಗಳು ಇದನ್ನ ಖಂಡಿಸಿದ್ದಾರೆ ವಿನಃ ಕಾಂಗ್ರೆಸ್ ಪಕ್ಷದ ಔಪಚಾರಿಕ ಪ್ರತಿರೋಧ ದುರ್ಬಲವಾಗಿದೆ.

ಕರ್ನಾಟಕದ ಕಾಂಗ್ರೆಸ್ ಮಂತ್ರಿಗಳು ಮತ್ತು ಶಾಸಕರು ಕೇವಲ ಐಷಾರಾಮಿ ಎಸಿ ಕೊಠಡಿಗಳಲ್ಲಿ ಕುಳಿತು ಟ್ವೀಟ್ ಮಾಡುವುದಕ್ಕೆ ಸೀಮಿತವಾಗಿದ್ದಾರೆ. ಮತದಾರರ ಪಟ್ಟಿಯಲ್ಲಿ ಹೆಸರುಗಳನ್ನು ಉಳಿಸಿಕೊಳ್ಳಲು ಇವರು ಎಷ್ಟು ಬೂತ್ ಮಟ್ಟದ ಅಭಿಯಾನಗಳನ್ನು ಹಮ್ಮಿಕೊಂಡಿದ್ದಾರೆ? ಜನರ ಮನೆ ಬಾಗಿಲಿಗೆ ಹೋಗಿ ಜಾಗೃತಿ ಮೂಡಿಸಲು ಇವರಿಗೆ ಸಮಯವಿಲ್ಲವೇ ಅಥವಾ ಆಸಕ್ತಿಯಿಲ್ಲವೇ?

ಇನ್ನು ಈಗ ಮುಸ್ಲಿಂ ಸಮುದಾಯದ ಮುಂದಿರುವುದು ಕೇವಲ ಮತದಾನದ ಪ್ರಶ್ನೆಯಲ್ಲ, ಅದು ಬದುಕಿನ ಪ್ರತಿ ಹಂತದ ಪ್ರಶ್ನೆ. ಹಿಜಾಬ್ ಧರಿಸುವುದು ಅವರ ಸಾಂವಿಧಾನಿಕ ಹಕ್ಕು. ಹಾಗೆಯೇ ಆಹಾರದ ಆಯ್ಕೆ ಅವರ ವೈಯಕ್ತಿಕ ವಿಚಾರ. ಆದರೆ ಬ್ರಾಹ್ಮಣ್ಯದ ಮತ್ತು ಆರೆಸೆಸ್ ಸಿದ್ಧಾಂತದ ಹೇರಿಕೆಯಿಂದಾಗಿ ಇಂದು ಸಾಮಾನ್ಯ ಜನರ ಆಹಾರ ಮತ್ತು ಉಡುಪೂ ಸಹ ಅಪರಾಧವಾಗಿ ಕಾಣುವಂತೆ ಮಾಡಲಾಗಿದೆ. ಈ ಬಗ್ಗೆ ಧ್ವನಿ ಎತ್ತಲು ಕಾಂಗ್ರೆಸ್ ನಾಯಕರಿಗೆ ಹಿಂದುತ್ವದ ಮತಗಳು ಎಲ್ಲಿ ಕೈತಪ್ಪಿ ಹೋಗುತ್ತವೆಯೋ ಎಂಬ ಭಯ ಕಾಡುತ್ತಿದೆ.

ಕರ್ನಾಟಕದ ಮುಸ್ಲಿಮರಲ್ಲಿ ಶಿಕ್ಷಣದ ಮಟ್ಟ ಹೆಚ್ಚುತ್ತಿದ್ದರೂ, ಸರ್ಕಾರಿ ಉದ್ಯೋಗಗಳಲ್ಲಿ ಅವರ ಪ್ರಾತಿನಿಧ್ಯ ಇಂದಿಗೂ ಶೋಚನೀಯವಾಗಿದೆ. ಸಮುದಾಯದ ಏಳಿಗೆಗಾಗಿ ವಿಶೇಷ ಪ್ಯಾಕೇಜ್ ಅಥವಾ ಯೋಜನೆಗಳನ್ನು ರೂಪಿಸುವ ಬದಲು, ಕಾಂಗ್ರೆಸ್ ಕೇವಲ ಅಲ್ಪಸಂಖ್ಯಾತರ ಹಿತರಕ್ಷಣೆ ಎಂಬ ಘೋಷಣೆಗೆ ಮಾತ್ರ ಸೀಮಿತವಾಗಿದೆ.

ರಾಜ್ಯದ ಜನಸಂಖ್ಯೆಯಲ್ಲಿ ಗಣನೀಯ ಪ್ರಮಾಣದಲ್ಲಿರುವ ಮುಸ್ಲಿಮರಿಗೆ ಶಾಸನಸಭೆಯಲ್ಲಿ ಸಿಗುತ್ತಿರುವ ಸ್ಥಾನ ಎಷ್ಟು? ಜನಸಂಖ್ಯೆಗೆ ಅನುಗುಣವಾಗಿ ಅವರಿಗೆ ಸೀಟುಗಳನ್ನು ನೀಡಲು ಕಾಂಗ್ರೆಸ್ ಹಿಂಜರಿಯುತ್ತಿದೆ. ಮುಸ್ಲಿಂ ನಾಯಕರನ್ನು ಕೇವಲ ಒಂದು ಸಮುದಾಯದ ಪ್ರತಿನಿಧಿಗಳಾಗಿ ನೋಡದೆ, ರಾಜ್ಯ ಮಟ್ಟದ ನಾಯಕರನ್ನಾಗಿ ಬೆಳೆಸುವ ಇಚ್ಛಾಶಕ್ತಿ ಕಾಂಗ್ರೆಸ್ಸಿಗಿಲ್ಲ. ಕೇವಲ ಒಬ್ಬಿಬ್ಬರಿಗೆ ಮಂತ್ರಿ ಸ್ಥಾನ ನೀಡುವುದರಿಂದ ಇಡೀ ಸಮುದಾಯದ ಉದ್ಧಾರ ಸಾಧ್ಯವಿಲ್ಲ.


''ಕಾಂಗ್ರೆಸ್ ಪಕ್ಷದಲ್ಲಿ ಹಣವಿದ್ದವರಿಗಷ್ಟೇ ಮಣೆ, ಹಣವಿಲ್ಲದಿದ್ದರೆ ಯಾವುದೇ ಸ್ಥಾನಮಾನವಿಲ್ಲ'' ಎನ್ನುವ ಮಾತು ಇಂದು ಕೇವಲ ಗುಸುಗುಸು ಚರ್ಚೆಯಾಗಿ ಉಳಿಯದೆ ಬಹಿರಂಗ ಸತ್ಯದಂತೆ ಕಾಣಿಸುತ್ತಿದೆ. ದಶಕಗಳ ಕಾಲ ಪಕ್ಷಕ್ಕಾಗಿ ಬೆವರು ಸುರಿಸಿದ, ಸಿದ್ಧಾಂತಕ್ಕಾಗಿ ಹೋರಾಡಿದ ಸಾಮಾನ್ಯ ಕಾರ್ಯಕರ್ತರು ಇಂದಿಗೂ ಕೇವಲ ಪೋಸ್ಟರ್ ಅಂಟಿಸುವ ಕೆಲಸಕ್ಕೆ ಸೀಮಿತವಾಗಿದ್ದಾರೆ. ಆದರೆ, ಚುನಾವಣೆಯ ಸಂದರ್ಭದಲ್ಲಿ ಬೇರೆ ಪಕ್ಷಗಳಿಂದ ಬಂದ ಕೋಟ್ಯಧಿಪತಿಗಳಿಗೆ ಅಥವಾ ಉದ್ಯಮಿಗಳಿಗೆ ರಾತ್ರೋರಾತ್ರಿ ಟಿಕೆಟ್ ಮತ್ತು ಉನ್ನತ ಸ್ಥಾನಮಾನಗಳು ಸಿಗುತ್ತಿರುವುದು ಪಕ್ಷದ ಆಂತರಿಕ ಪ್ರಜಾಪ್ರಭುತ್ವ ಎಷ್ಟು ಶಿಥಿಲವಾಗಿದೆ ಎಂಬುದನ್ನು ತೋರಿಸುತ್ತದೆ. ಮುಸ್ಲಿಂ ಸಮುದಾಯದ ವಿಚಾರದಲ್ಲೂ ಇದೇ ಆತಂಕ ಎದುರಾಗಿದೆ. ಸಮುದಾಯದ ಸಾಮಾನ್ಯ, ಪ್ರಾಮಾಣಿಕ ನಾಯಕರಿಗೆ ಅವಕಾಶ ನೀಡುವ ಬದಲು, ಕೇವಲ ಆರ್ಥಿಕವಾಗಿ ಸಬಲರಾದವರಿಗೆ ಮಾತ್ರ ಆದ್ಯತೆ ನೀಡುವುದರಿಂದ ಸಾಮಾನ್ಯ ಜನರ ಧ್ವನಿ ವಿಧಾನಸಭೆಯಲ್ಲಿ ಅಡಗುತ್ತಾ ಸಾಗಿದೆ. ಕಾಂಗ್ರೆಸ್ ಕೂಡ ಕೇವಲ ಶ್ರೀಮಂತರ ಮತ್ತು ಬಂಡವಾಳಶಾಹಿಗಳ ಪಕ್ಷವಾಗಿ ಮಾರ್ಪಟ್ಟು, ತಳಮಟ್ಟದ ಜನಸಮುದಾಯದ ನಂಬಿಕೆಯನ್ನು ಪೂರ್ಣವಾಗಿ ಕಳೆದುಕೊಳ್ಳುವ ಅಪಾಯದ ಹಂತದಲ್ಲಿದೆ. ಆರ್‌ಎಸ್‌ಎಸ್ ಮತ್ತು ಬಜರಂಗದಳದಂತಹ ಸಂಘಟನೆಗಳು ಮುಸ್ಲಿಂ ಯುವಕರನ್ನು ಟಾರ್ಗೆಟ್ ಮಾಡುತ್ತಿದ್ದರೂ, ಕಾಂಗ್ರೆಸ್ ಸರ್ಕಾರ ಅವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಲ್ಲಿ ವಿಫಲವಾಗಿದೆ. ''ನಮ್ಮ ಸರ್ಕಾರ ಇದೆ, ನಮಗೆ ರಕ್ಷಣೆ ಸಿಗುತ್ತದೆ'' ಎಂಬ ಭರವಸೆ ಮುಸ್ಲಿಮರಲ್ಲಿ ಮೂಡುತ್ತಿಲ್ಲ. ಅಪರಾಧಿಗಳಿಗೆ ಶಿಕ್ಷೆಯಾಗುವ ಬದಲು, ಸಂತ್ರಸ್ತರಿಗೆ ಕೇವಲ ಭರವಸೆಯ ಸಾಂತ್ವನ ಸಿಗುತ್ತಿದೆ.

ಈಗಲೂ ಕಾಲ ಮಿಂಚಿಲ್ಲ. ಜನಪರ ಸಂಘಟನೆಗಳು ಮತ್ತು ಜಾತ್ಯತೀತ ಪಕ್ಷಗಳು ಕಾಂಗ್ರೆಸ್ ಪಕ್ಷವನ್ನು ಪ್ರಶ್ನೆ ಮಾಡಲೇಬೇಕು. ಪ್ರತಿ ಹಳ್ಳಿಯಲ್ಲಿ, ಪ್ರತಿ ವಾರ್ಡ್‌ನಲ್ಲಿ ಮುಸ್ಲಿಂ, ದಲಿತ ಹಾಗೂ ಬಡ ಮತದಾರರ ಪಟ್ಟಿಯನ್ನು ಮರುಪರಿಶೀಲಿಸಬೇಕು. ಹೆಸರು ಕೈಬಿಟ್ಟಿದ್ದರೆ ತಕ್ಷಣವೇ ಸೇರಿಸುವ ಕೆಲಸವಾಗಬೇಕು. ಕರ್ನಾಟಕದ ನಾಯಕರು ಮಮತಾ ಬ್ಯಾನರ್ಜಿಯವರಿಂದ ಕಲಿಯಬೇಕಾದ್ದು ಬಹಳಷ್ಟಿದೆ. ಅಧಿಕಾರಕ್ಕಾಗಿ ಸಮುದಾಯದ ಹಿತವನ್ನು ಬಲಿಗೊಡುವುದು ಸರಿಯಲ್ಲ.

ಕಾಂಗ್ರೆಸ್ ಪಕ್ಷಕ್ಕೆ ಅಹಿಂದ ಮತಗಳು ಕೇವಲ ಗೆಲ್ಲುವ ಸಾಧನವಾಗಬಾರದು. ಅಹಿಂದ ಈ ದೇಶದ, ಈ ರಾಜ್ಯದ ಸಮಾನ ನಾಗರಿಕರು. ಅವರ ಹಕ್ಕುಗಳನ್ನು ಕಿತ್ತುಕೊಳ್ಳುವ ಪಿತೂರಿ ನಡೆದಾಗ ಕಾಂಗ್ರೆಸ್ ಮೌನವಾಗಿದ್ದರೆ, ಅದು ಬಿಜೆಪಿಯ ಸಂಚಿಗೆ ಮೌನವಾಗಿ ಬೆಂಬಲ ನೀಡಿದಂತೆ ಅರ್ಥವಾಗುತ್ತದೆ. ಬ್ರಾಹ್ಮಣ್ಯದ ಮತ್ತು ಕೋಮುವಾದಿ ದಾಳಿಯಿಂದ ಸಮುದಾಯವನ್ನು ರಕ್ಷಿಸುವುದು ಕಾಂಗ್ರೆಸ್‌ನ ಸಾಂವಿಧಾನಿಕ ಜವಾಬ್ದಾರಿ. ಈ ಜವಾಬ್ದಾರಿಯನ್ನು ಅವರು ಮರೆತರೆ, ಮುಂದಿನ ದಿನಗಳಲ್ಲಿ ಜಾತ್ಯತೀತ ಶಕ್ತಿಗಳು ಕಾಂಗ್ರೆಸ್‌ನ ವಿರುದ್ಧವೂ ಧ್ವನಿ ಎತ್ತಬೇಕಾಗುತ್ತದೆ. ಜನರ ಹಕ್ಕಿಗಾಗಿ ಹೋರಾಡದ ನಾಯಕ ನಾಯಕನೇ ಅಲ್ಲ. ಕಾಂಗ್ರೆಸ್ ಈಗಲಾದರೂ ಎಚ್ಚೆತ್ತುಕೊಳ್ಳಲಿ, ಕೇವಲ ಮಾತು ಬಿಟ್ಟು ಕೃತಿಯಲ್ಲೂ ಅಹಿಂದ ರಕ್ಷಣೆಗೆ ನಿಲ್ಲಲಿ.

# ಪೆಟ್ರೋಲ್ -ಡೀಸೆಲ್ ಎಥೆನಾಲ್ ಮಿಶ್ರಣ ಶೇ. 20ಕ್ಕೆ ಹೆಚ್ಚಳ; ಆರ್ಥಿಕ ಲಾಭವೋ, ಪರೋಕ್ಷ ನಷ್ಟವೋ?

ಎಥೆನಾಲ್ ಮಿಶ್ರಣ ಪ್ರಮಾಣದ ಹೆಚ್ಚಳವು ಆರ್ಥಿಕತೆ ಬಲವರ್ಧನೆ ಮತ್ತು ಪರಿಸರ ಸಂರಕ್ಷಣೆಯ ದೃಷ್ಟಿಯಿಂದ ಮೇಲ್ನೋಟಕ್ಕೆ ಹೆಚ್ಚು ಲಾಭದಾಯಕವಾಗಿ ಕಂಡರೂ, ಹಳೆಯ ವಾಹನಗಳ ದಕ್ಷತೆಯ ಮೇಲಿನ ವ್ಯತಿರಿಕ್ತ ಪರಿಣಾಮ, ಆಹಾರ ಭದ್ರತೆಗೆ ಒದಗಬಹುದಾದ ಕುತ್ತು ಮತ್ತು ಜಲ ಸಂಪನ್ಮೂಲಗಳ ಮೇಲಿನ ತೀವ್ರ ಒತ್ತಡದಂತಹ ನಷ್ಟದ ಆಯಾಮಗಳನ್ನು ಕಡೆಗಣಿಸುವಂತಿಲ್ಲ




ಕೇಂದ್ರ ಸರ್ಕಾರವು ಪೆಟ್ರೋಲ್ ಮತ್ತು ಡೀಸೆಲ್‌ನಲ್ಲಿ ಎಥೆನಾಲ್ ಮಿಶ್ರಣದ ಪ್ರಮಾಣವನ್ನು ಪ್ರಸ್ತುತ ಇರುವ ಶೇಕಡ 10 ರಿಂದ ಶೇಕಡ 20ಕ್ಕೆ (ಇ-20) ಹೆಚ್ಚಿಸುವ ಮಹತ್ವಾಕಾಂಕ್ಷಿ ಗುರಿಯನ್ನು ಹೊಂದಿದ್ದು, ಈ ದಿಶೆಯಲ್ಲಿ ದೃಢ ಹೆಜ್ಜೆಗಳನ್ನಿಡುತ್ತಿದೆ. ಈ ಮಹತ್ವದ ಯೋಜನೆಯನ್ನು 2030ರ ಬದಲಾಗಿ 2025-26ನೇ ಸಾಲಿಗೆ ಪೂರ್ಣಗೊಳಿಸುವ ಪರಿಷ್ಕೃತ ಗುರಿ ನಿಗದಿಪಡಿಸಲಾಗಿದೆ. ಈ ತ್ವರಿತ ನಡೆಯು ದೇಶದ ಬೃಹತ್ ಆರ್ಥಿಕತೆ, ಹವಾಮಾನ ಬದಲಾವಣೆ ಮತ್ತು ಕೃಷಿ ವಲಯದ ಮೇಲೆ ದೂರಗಾಮಿ ಪರಿಣಾಮಗಳನ್ನು ಬೀರಲಿದ್ದು, ಇದರಿಂದಾಗುವ ಲಾಭ ಮತ್ತು ನಷ್ಟಗಳ ಎರಡೂ ಆಯಾಮಗಳ ಕುರಿತು ಆರ್ಥಿಕ ಹಾಗೂ ತಾಂತ್ರಿಕ ವಲಯಗಳಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ಈ ಯೋಜನೆಯ ಅತಿದೊಡ್ಡ ಮತ್ತು ನೇರ ಲಾಭವೆಂದರೆ ಅಂತಾರಾಷ್ಟ್ರೀಯ ಮಾರುಕಟ್ಟೆಯಿಂದ ಕಚ್ಚಾ ತೈಲ ಆಮದಿನ ಮೇಲಿನ ಅವಲಂಬನೆ ಕಡಿತಗೊಳ್ಳುವುದು. ಭಾರತವು ಪ್ರಸ್ತುತ ತನ್ನ ಒಟ್ಟು ತೈಲ ಅಗತ್ಯದ ಶೇಕಡ 85ರಷ್ಟನ್ನು ಕೇವಲ ಆಮದು ಮಾಡಿಕೊಳ್ಳುತ್ತಿದ್ದು, ಭಾರಿ ಮೊತ್ತದ ಹಣ ಪಾವತಿಸುತ್ತಿದೆ. ಎಥೆನಾಲ್ ಮಿಶ್ರಣವನ್ನು ಶೇಕಡ 20ಕ್ಕೆ ಹೆಚ್ಚಿಸುವುದರಿಂದ ವಾರ್ಷಿಕವಾಗಿ ಅಂದಾಜು 30,000 ದಿಂದ 35,000 ಕೋಟಿ ರೂಪಾಯಿಗಳಷ್ಟು ಮೌಲ್ಯದ ಅಮೂಲ್ಯ ವಿದೇಶಿ ವಿನಿಮಯ ಉಳಿತಾಯವಾಗಲಿದೆ.

ಪರಿಸರ ಸಂರಕ್ಷಣೆಯ ದೃಷ್ಟಿಯಿಂದಲೂ ಎಥೆನಾಲ್ ಬಳಕೆಯ ಹೆಚ್ಚಳವು ಅತ್ಯಂತ ಆಶಾದಾಯಕ ಬೆಳವಣಿಗೆಯಾಗಿದೆ. ಸಾಂಪ್ರದಾಯಿಕ ಪಳೆಯುಳಿಕೆ ಇಂಧನಗಳಿಗೆ ಹೋಲಿಸಿದರೆ ಎಥೆನಾಲ್ ಉರಿಯುವಾಗ ಇಂಗಾಲದ ಮಾನಾಕ್ಸೈಡ್ ಮತ್ತು ಹೈಡ್ರೋಕಾರ್ಬನ್ ಮುಂತಾದ ವಿಷಕಾರಿ ಅನಿಲಗಳ ಹೊರಸೂಸುವಿಕೆ ಗಣನೀಯವಾಗಿ ಕಡಿಮೆಯಾಗುತ್ತದೆ. ಇದು ಹವಾಮಾನ ಬದಲಾವಣೆ ವಿರುದ್ಧದ ಜಾಗತಿಕ ಹೋರಾಟದಲ್ಲಿ ಭಾರತದ ಬದ್ಧತೆಯನ್ನು ಪ್ರದರ್ಶಿಸುವುದಲ್ಲದೆ, ದೆಹಲಿ, ಬೆಂಗಳೂರಿನಂತಹ ಮಹಾನಗರ ಪ್ರದೇಶಗಳಲ್ಲಿ ಹೆಚ್ಚುತ್ತಿರುವ ವಾಯುಮಾಲಿನ್ಯವನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವಲ್ಲಿ ಹಾಗೂ ಗಾಳಿಯ ಗುಣಮಟ್ಟ ಸುಧಾರಿಸುವಲ್ಲಿ ಮಹತ್ವದ ನೆರವು ನೀಡಲಿದೆ.

ಕೃಷಿ ವಲಯಕ್ಕೆ ಹಾಗೂ ಗ್ರಾಮೀಣ ಆರ್ಥಿಕತೆಗೆ ಈ ಯೋಜನೆಯು ದೊಡ್ಡ ವರದಾನವಾಗುವ ನಿರೀಕ್ಷೆ ದಟ್ಟವಾಗಿದೆ. ಪ್ರಮುಖವಾಗಿ ಕಬ್ಬು ಬೆಳೆಗಾರರಿಗೆ, ಹಾಗೂ ಮಳೆಯಿಂದ ಹಾನಿಗೊಳಗಾದ ಅಕ್ಕಿ, ಮುರಿದುಹೋದ ಅಕ್ಕಿ ಮತ್ತು ಮೆಕ್ಕೆಜೋಳ ಮುಂತಾದ ಧಾನ್ಯಗಳನ್ನು ಎಥೆನಾಲ್ ಉತ್ಪಾದನೆಗೆ ಬಳಸಿಕೊಳ್ಳುವುದರಿಂದ ರೈತರಿಗೆ ನಿರಂತರ ಮತ್ತು ಹೆಚ್ಚುವರಿ ಆದಾಯದ ಮೂಲ ಸೃಷ್ಟಿಯಾಗಲಿದೆ. ಇದರಿಂದಾಗಿ ಸಕ್ಕರೆ ಕಾರ್ಖಾನೆಗಳ ಆರ್ಥಿಕ ಸ್ಥಿತಿ ಸುಧಾರಿಸಿ, ದಶಕಗಳಿಂದ ಕಾಡುತ್ತಿರುವ ರೈತರ ಬಾಕಿ ಪಾವತಿ ಸಮಸ್ಯೆಗಳು ಹಾಗೂ ಆರ್ಥಿಕ ಸಂಕಷ್ಟಗಳು ಬಹುಪಾಲು ಶಾಶ್ವತವಾಗಿ ನಿವಾರಣೆಯಾಗಲಿವೆ.

ಆದರೆ, ಈ ಯೋಜನೆಯ ನಷ್ಟದ ಮುಖವನ್ನು ತಾಂತ್ರಿಕವಾಗಿ ನೋಡುವುದಾದರೆ ಪ್ರಸ್ತುತ ಇರುವ ವಾಹನಗಳ ಎಂಜಿನ್ ಕಾರ್ಯಕ್ಷಮತೆ ಬಹುದೊಡ್ಡ ಸವಾಲಾಗಿದೆ. ಶೇಕಡ 20ರಷ್ಟು ಎಥೆನಾಲ್ ಮಿಶ್ರಿತ (ಇ-20) ಇಂಧನವನ್ನು ಬಿಎಸ್-4 ಅಥವಾ ಹಳೆಯ ವಾಹನಗಳಲ್ಲಿ ಬಳಸಿದಾಗ ಇಂಧನ ದಕ್ಷತೆಯು ಶೇಕಡ 6ರಿಂದ 7ರಷ್ಟು ಕುಸಿಯುವ ಸಾಧ್ಯತೆಯಿದೆ ಎಂದು ತಜ್ಞರು ಅಂದಾಜಿಸಿದ್ದಾರೆ. ಅಲ್ಲದೆ, ಎಥೆನಾಲ್ ಸ್ವಾಭಾವಿಕವಾಗಿ ನೀರು ಹೀರುವ (ಹೈಗ್ರೋಸ್ಕೋಪಿಕ್) ಗುಣ ಹೊಂದಿದ್ದು, ಇದು ಹಳೆಯ ವಾಹನಗಳ ಎಂಜಿನ್‌ನೊಳಗಿನ ರಬ್ಬರ್ ಪ್ಲಾಸ್ಟಿಕ್ ಬಿಡಿಭಾಗಗಳು ಮತ್ತು ಪೈಪ್‌ಗಳ ತ್ವರಿತ ಸವೆತಕ್ಕೆ ಅಥವಾ ತುಕ್ಕು ಹಿಡಿಯುವಿಕೆಗೆ ಕಾರಣವಾಗಬಹುದು.

ಕೇವಲ ವಾಹನಗಳ ದಕ್ಷತೆ ಮಾತ್ರವಲ್ಲದೆ, ದೇಶದ ದೀರ್ಘಕಾಲಿಕ ಆಹಾರ ಭದ್ರತೆಯ ದೃಷ್ಟಿಯಿಂದಲೂ ಈ ನಡೆ ಕಳವಳಕಾರಿಯಾಗಿದೆ ಎಂಬುದು ಕೃಷಿ ತಜ್ಞರ ಗಂಭೀರ ಎಚ್ಚರಿಕೆಯಾಗಿದೆ. ಭವಿಷ್ಯದಲ್ಲಿ ಎಥೆನಾಲ್ ಉತ್ಪಾದನೆಗೆ ಕಬ್ಬು ಮತ್ತು ಆಹಾರ ಧಾನ್ಯಗಳನ್ನು ಮಿತಿಮೀರಿ ಬಳಸುವುದರಿಂದ ಆಹಾರವೋ ಅಥವಾ ಇಂಧನವೋ ( ) ಎಂಬ ಅಪಾಯಕಾರಿ ಸಂಘರ್ಷ ಸೃಷ್ಟಿಯಾಗಬಹುದು. ಬರಗಾಲ, ಪ್ರವಾಹ ಅಥವಾ ಇತರೆ ನೈಸರ್ಗಿಕ ವಿಕೋಪಗಳಿಂದ ಬೆಳೆ ಹಾನಿಯಾದಾಗ ಆಹಾರ ಧಾನ್ಯಗಳ ತೀವ್ರ ಕೊರತೆ ಎದುರಾಗಿ, ದಿನಬಳಕೆಯ ವಸ್ತುಗಳ ಬೆಲೆ ಏರಿಕೆಯಾಗಿ ಜನಸಾಮಾನ್ಯರಿಗೆ ಆರ್ಥಿಕ ಹೊರೆಯಾಗುವ ಅಪಾಯ ಸ್ಪಷ್ಟವಾಗಿದೆ.

ಇದರ ಜೊತೆಗೆ, ಎಥೆನಾಲ್ ಉತ್ಪಾದನೆಗೆ ಅತ್ಯಗತ್ಯವಾಗಿರುವ ಕಬ್ಬು ಅತಿ ಹೆಚ್ಚು ನೀರು ಬೇಡುವ ಮತ್ತು ಭೂಮಿಯ ಫಲವತ್ತತೆ ಹೀರುವ ಬೆಳೆಯಾಗಿದೆ. ಭಾರತದಂತಹ ಅಂತರ್ಜಲ ಕುಸಿತದ ಗಂಭೀರ ಸಮಸ್ಯೆ ಎದುರಿಸುತ್ತಿರುವ ದೇಶದಲ್ಲಿ, ಕೇವಲ ಇಂಧನಕ್ಕಾಗಿ ಕಬ್ಬು ಬೆಳೆಯುವುದನ್ನು ಎಲ್ಲೆಡೆ ಉತ್ತೇಜಿಸುವುದು ಭವಿಷ್ಯದಲ್ಲಿ ತೀವ್ರ ಕುಡಿಯುವ ನೀರಿನ ಅಭಾವಕ್ಕೆ ಹಾಗೂ ಕೃಷಿ ಬಿಕ್ಕಟ್ಟಿಗೆ ದಾರಿಮಾಡಿಕೊಡಬಹುದು. ಇದು ಪರಿಸರ ಸಮತೋಲನದ ದೃಷ್ಟಿಯಿಂದ ಹಾಗೂ ಭವಿಷ್ಯದ ಜಲ ಭದ್ರತೆಯ ನಿಟ್ಟಿನಲ್ಲಿ ದೊಡ್ಡ ಆತಂಕವಾಗಿ ಪರಿಣಮಿಸಲಿದೆ ಎಂಬುದು ಪರಿಸರವಾದಿಗಳ ವಾದ.

ಎಥೆನಾಲ್ ಮಿಶ್ರಣ ಪ್ರಮಾಣದ ಹೆಚ್ಚಳವು ಆರ್ಥಿಕತೆ ಬಲವರ್ಧನೆ ಮತ್ತು ಪರಿಸರ ಸಂರಕ್ಷಣೆಯ ದೃಷ್ಟಿಯಿಂದ ಮೇಲ್ನೋಟಕ್ಕೆ ಹೆಚ್ಚು ಲಾಭದಾಯಕವಾಗಿ ಕಂಡರೂ, ಹಳೆಯ ವಾಹನಗಳ ದಕ್ಷತೆಯ ಮೇಲಿನ ವ್ಯತಿರಿಕ್ತ ಪರಿಣಾಮ, ಆಹಾರ ಭದ್ರತೆಗೆ ಒದಗಬಹುದಾದ ಕುತ್ತು ಮತ್ತು ಜಲ ಸಂಪನ್ಮೂಲಗಳ ಮೇಲಿನ ತೀವ್ರ ಒತ್ತಡದಂತಹ ನಷ್ಟದ ಆಯಾಮಗಳನ್ನು ಕಡೆಗಣಿಸುವಂತಿಲ್ಲ. ಸರ್ಕಾರವು ಎರಡನೇ ತಲೆಮಾರಿನ (ಸೆಲ್ಯುಲೋಸಿಕ್) ಪರ್ಯಾಯ ಕಚ್ಚಾವಸ್ತುಗಳ ಶೋಧನೆ ಹಾಗೂ ಆಟೋಮೊಬೈಲ್ ತಂತ್ರಜ್ಞಾನದ ಮೇಲ್ದರ್ಜೆಗೇರಿಸುವಿಕೆಯನ್ನು ಎಚ್ಚರಿಕೆಯಿಂದ ಸಮತೋಲನದಲ್ಲಿ ಕೊಂಡೊಯ್ದರೆ ಮಾತ್ರ ಈ ಮಹತ್ವದ ಯೋಜನೆ ಸಂಪೂರ್ಣ ಯಶಸ್ವಿಯಾಗಬಲ್ಲದು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR